ವಿಜಯಪುರ | ಸಂಪುಟ 02 | ಸಂಚಿಕೆ 20 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily


ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ    Editor: Indushekhar Manur

editor.udayarashmi@gmail.com    RNI NO: KARKAN/2023/86203    ಶುಕ್ರವಾರ, ಮಾರ್ಚ್ 08, 2024

“ದಲಿತ ಮುಖ್ಯಮಂತ್ರಿ ಬೇಡಿಕೆ ಇಂದು ನಿನ್ನೆಯದಲ್ಲ. ದಶಕಗಳಿಂದ ಇದೆ. ಇದುವರೆಗೆ ಯಾವುದೇ ಪಕ್ಷದಲ್ಲೂ ದಲಿತ ವ್ಯಕ್ತಿ ಮುಖ್ಯಮಂತ್ರಿಯಾಗಿಲ್ಲ. ಈ ವಿಷಯದಲ್ಲಿ ನಮ್ಮ ಪಕ್ಷ 99 ರವರೆಗೆ ಬಂದು ಔಟಾಗಿಬಿಡುತ್ತದೆ. ಸೆಂಚುರಿ ಬಾರಿಸಲ್ಲ.”



– ಸತೀಶ್ ಜಾರಕಿಹೊಳಿ
ಲೋಕೋಪಯೋಗಿ ಸಚಿವರು

## ಬಸವಕಲ್ಯಾಣದಲ್ಲಿ ಸಿಎಂ ಸಿದ್ದರಾಮಯ್ಯ ಘೋಷಣೆ । 160 ಸ್ವಾಮೀಜಿಗಳು, ಮಠಾಧೀಶರಿಂದ ಸನ್ಮಾನ

# ರಾಜ್ಯದಲ್ಲಿ ‘ವಚನ ವಿಶ್ವವಿದ್ಯಾಲಯ’ ಸ್ಥಾಪನೆಗೆ ನಿರ್ಧಾರ

ಬೀದರ್: ರಾಜ್ಯದಲ್ಲಿ ಮುಂದಿನ ವರ್ಷ ‘ವಚನ ವಿಶ್ವವಿದ್ಯಾಲಯ’ ಸ್ಥಾಪನೆ ಮಾಡಲು ನಿರ್ಧರಿಸಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಬಸವಕಲ್ಯಾಣದಲ್ಲಿ ಘೋಷಿಸಿದ್ದಾರೆ.

ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದ್ದಕ್ಕಾಗಿ 160 ಸ್ವಾಮೀಜಿಗಳು, ಗುರುಗಳು ಹಾಗೂ ವೀರಶೈವ ಲಿಂಗಾಯತ ಮಠಾಧೀಶರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಸಿಎಂ ಅವರು, ಜಾತಿ, ವರ್ಗ, ಅಸಮಾನತೆ ಇಲ್ಲದ ಮನುಷ್ಯತ್ವದ ಸಮಾಜ ನಿರ್ಮಾಣ ಬಸವಣ್ಣರ ಗುರಿಯಾಗಿತ್ತು. ಹೀಗಾಗಿ ಬುದ್ಧ, ಬಸವ, ಅಂಬೇಡ್ಕರ್ ನನಗೆ ಮಾರ್ಗದರ್ಶಕರು. ಇವರ ವಿಚಾರಗಳು ಇಂದು, ನಾಳೆ ಮಾತ್ರವಲ್ಲ ಯಾವತ್ತೂ ಶಾಶ್ವತ ಎಂದರು.



ಜಾತಿ ಪದ್ಧತಿ, ಅಸ್ಪೃಶ್ಯತೆ, ಅಸಮಾನತೆ, ಶೋಷಣೆ ಹಾಗೂ ಧಾರ್ಮಿಕ ಢಂಬಾಚಾರದ ವಿರುದ್ಧ ಬಂಡೆದ್ದ ಬಸವಾದಿ ಶರಣರು ಜನರಲ್ಲಿ ಅರಿವುಮೂಡಿಸಲು ಆಯ್ದುಕೊಂಡ ಸಾಧನ “ವಚನ ಸಾಹಿತ್ಯ.” ವಚನಗಳಲ್ಲಿ ಬಸವೇಶ್ವರರಾದಿಯಾಗಿ ನೂರಾರು ಶರಣರ ಬದುಕಿನ ಅನುಭವದ ಸಾರವಿದೆ, ಅಂಧಶ್ರದ್ದೆ- ಮೌಢ್ಯದ ವಿರುದ್ಧದ ಆಕ್ರೋಶವಿದೆ, ಜ್ಞಾನದ ಬೆಳಕಿದೆ ಎಂದು ಸಿಎಂ ಹೇಳಿದರು.

ಶರಣರ ವಚನಗಳು ಹಾಳೆಗಳಿಗೆ ಸೀಮಿತವಾಗಬಾರದು, ವಚನಗಳ ಪ್ರತಿ ಅಕ್ಷರ ಜನರ ಎದೆಗೆ ಇಳಿಯಬೇಕು. ಆ ಮೂಲಕ ಬಸವಣ್ಣನವರ ಸಮಸಮಾಜದ ಕನಸು ಸಾಕಾರಗೊಳ್ಳಬೇಕು. ಈ ಉದ್ದೇಶದಿಂದ ಮುಂದಿನ ವರ್ಷ ‘ವಚನ ವಿಶ್ವವಿದ್ಯಾಲಯ’ ಸ್ಥಾಪನೆ ಮಾಡಬೇಕೆಂದು ನಿರ್ಧರಿಸಿದ್ದೇನೆ ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ.

## 5,8,9 ಮತ್ತು 11ನೇ ತರಗತಿಗೆ ಬೋರ್ಡ್ ಪರೀಕ್ಷೆಗೆ ಹೈಕೋರ್ಟ್ ವಿಭಾಗೀಯ ಪೀಠ ಅಸ್ತು



ಬೆಂಗಳೂರು: ಮಹತ್ವದ ಬೆಳವಣಿಗೆಯಲ್ಲಿ 5,8,9 ಮತ್ತು 11ನೇ ತರಗತಿಗಳಿಗೆ ಬೋರ್ಡ್ ಪರೀಕ್ಷೆ ನಡೆಸಲು ಹೈಕೋರ್ಟ್ ವಿಭಾಗೀಯ ಪೀಠ ಗುರುವಾರ ಅನುಮತಿ ನೀಡಿದೆ.

ಬುಧವಾರ 5, 8, 9 ಮತ್ತು 11ನೇ ತರಗತಿಗೆ ಬೋರ್ಡ್ ಪರೀಕ್ಷೆಯನ್ನು ರದ್ದುಗೊಳಿಸಿದ್ದ ಹೈಕೋರ್ಟ್ ಏಕ ಸದಸ್ಯ ಪೀಠದ ಆದೇಶ ಪ್ರಶ್ನಿಸಿ ರಾಜ್ಯ ಸರ್ಕಾರ ಸಲ್ಲಿಸಿದ್ದ ಮೇಲ್ಮನವಿ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ವಿಭಾಗೀಯ ಪೀಠ, ಬೋರ್ಡ್ ಪರೀಕ್ಷೆ ನಡೆಸಲು ಅನುಮತಿ ನೀಡಿದೆ. ಈ ಹಿನ್ನೆಲೆಯಲ್ಲಿ ನಿಗದಿಯಂತೆ ಸೋಮವಾರದಿಂದ ಬೋರ್ಡ್ ಪರೀಕ್ಷೆಗಳು ನಡೆಯಲಿವೆ.

2023-24ನೇ ಸಾಲಿನಿಂದ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ವತಿಯಿಂದ 5,8,9ನೇ ತರಗತಿಗಳ ವಿದ್ಯಾರ್ಥಿಗಳಿಗೆ ಬೋರ್ಡ್ ಪರೀಕ್ಷೆ ನಡೆಸಲು ರಾಜ್ಯ ಸರ್ಕಾರ ಆದೇಶ ಹೊರಡಿಸಿತ್ತು. ಸರ್ಕಾರದ ಈ ಆದೇಶವನ್ನು ಪ್ರಶ್ನಿಸಿ ಅನುದಾನ ರಹಿತ ಶಾಲೆಗಳ ಸಂಘ ಹೈಕೋರ್ಟ್ ಮೆಟ್ಟಿಲೇರಿತ್ತು. ಈ ಹಿನ್ನೆಲೆಯಲ್ಲಿ ಹೈಕೋರ್ಟ್ ಏಕಸದಸ್ಯ ಪೀಠ ಬೋರ್ಡ್ ಪರೀಕ್ಷೆಯನ್ನು ರದ್ದುಪಡಿಸಿತ್ತು. ಆದರೆ ರಾಜ್ಯ ಸರ್ಕಾರ ಈ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಿತ್ತು.

9ನೇ ತರಗತಿ ಮತ್ತು 11ನೇ ತರಗತಿ ವಿದ್ಯಾರ್ಥಿಗಳಿಗೂ ಪಬ್ಲಿಕ್ ಪರೀಕ್ಷೆ ನಡೆಸುವುದರಿಂದ ವಿದ್ಯಾರ್ಥಿಗಳ ಕಲಿಕೆಯಲ್ಲಿ ಗಂಭೀರತೆ ಕಾಣಬಹುದು ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಮಧುಬಂಗಾರಪ್ಪ ಅವರು ಹೇಳಿದ್ದರು.

### ರಾಜ ನುಡಿ

ನನ್ನ ಅರ್ಥದಲ್ಲಿ ಲಘುವಾದದ್ದನ್ನು ಘನೀಕರಿಸುವ ಮತ್ತು ಘನವಾದದ್ದನ್ನು ಮಹಾಘನದೊಂದಿಗೆ ಬೆರೆಸಿ ಬೆಳೆಸುವ ತಾಕತ್ತು ನಮ್ಮೊಳಗಿನ ‘ಅರಿವಿನ ಗುರು’ವಿಗೆ ಮಾತ್ರ ಇದೆ.

-ಡಾ. ರಾಜಶೇಖರ ನಾಗೂರ

## ಕಾಲುವೆಯಲ್ಲಿ ಕಾಲು ಜಾರಿ ತಾಯಿ ಮಗು ಸಾವು

ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ಕಾಲುವೆಯಲ್ಲಿ ಕಾಲು ಜಾರಿ ತಾಯಿ, ಮಗು ಸಾವನ್ನಪ್ಪಿದ ಘಟನೆ ಪಡಗಾನೂರ ಗ್ರಾಮದಲ್ಲಿ ಜರುಗಿದೆ.

ತಾಲ್ಲೂಕಿನ ಪಡಗಾನೂರ ಗ್ರಾಮದಲ್ಲಿ ಗುರುವಾರ ಈ ಘಟನೆ ಸಂಭವಿಸಿದೆ. ಭಾರತಿ ಶ್ರೀಶೈಲ ಸಾತಿಹಾಳ(28) ಎಂಬ ಮಹಿಳೆ ಬಟ್ಟೆ ತೊಳೆಯಲು ತನ್ನ ಮಗ ಸಂಪತ್(10) ನೊಂದಿಗೆ ಮುಳವಾಡ ಮುಖ್ಯ ಕಾಲುವೆಗೆ ತೆರಳಿದ್ದು, ಈ ಸಮಯದಲ್ಲಿ ಮಗ ಸಂಪತ್ ಕಾಲು ಜಾರಿ ಕಾಲುವೆಗೆ ಬಿದ್ದಿದ್ದನ್ನು ಗಮನಿಸಿದ ತಾಯಿ ಅವನನ್ನು ರಕ್ಷಿಸಲು ತಾನು ಕಾಲುವೆಗೆ ಇಳಿದ ಪರಿಣಾಮ ಈಜು ಬಾರದೇ ಇಬ್ಬರು ಮೃತಪಟ್ಟಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ದೇವರಹಿಪ್ಪರಗಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ರಸ್ತೆ ಸಂಚಾರ ನಿಯಮ ಪಾಲಿಸಿ: ಪಿಐ ಮರಗುಂಡಿ




ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಪಟ್ಟಣದ ಪ್ರಮುಖ ರಸ್ತೆಯಲ್ಲಿ ವಾಹನ ಸಂಚಾರ ಸುಗಮವಾಗಲು ರಸ್ತೆ ಬದಿ ಬೈಕ್, ವಾಹನಗಳನ್ನು ಅಡಾದಿಡ್ಡಿಯಾಗಿ ನಿಲ್ಲಿಸದೇ ಸರಿಯಾಗಿ ನಿಲ್ಲಿಸಬೇಕೆಂದು ಪಿಐ ವಿಜಯ ಮರಗುಂಡಿ ಹೇಳಿದರು.

ಪಟ್ಟಣದ ವಿಜಯಪುರ ಪ್ರಮುಖ ರಸ್ತೆ, ಬಸ್ ನಿಲ್ದಾಣದ ರಸ್ತೆಯ ಎರಡು ಬದಿಗಳಲ್ಲಿ ಅಡಾದಿಡ್ಡಿಯಾಗಿ ನಿಂತಿರುವ ಬೈಕ್, ಇತರೇ ವಾಹನಗಳ ಮಾಲೀಕರಿಗೆ ಗುರುವಾರ ತಿಳಿಸುವ ಮೂಲಕ ವಾಹನ ಸಂಚಾರ ಸುಗಮವಾಗಲು, ಅಪಘಾತ ತಡೆಗಟ್ಟಲು ಪೊಲೀಸ್ ಇಲಾಖೆಯೊಂದಿಗೆ ಸಹಕಾರ ನೀಡಬೇಕೆಂದು ಹೇಳಿದ ಅವರು, ಭಾರತೀಯ ಸ್ಟೇಟ್ ಬ್ಯಾಂಕಿಗೆ ನಿತ್ಯ ಸಾಕಷ್ಟು ಗ್ರಾಹಕರು ಬರುತ್ತಾರೆ. ಬ್ಯಾಂಕಿಗೆ ಬರುವ ಗ್ರಾಹಕರ ಬೈಕ್ಗಳನ್ನು ಸಾಲಾಗಿ ನಿಲ್ಲಿಸುವಂತೆ ಬ್ಯಾಂಕಿನ ಸೆಕ್ಯೂರಿಟಿಗೆ ಸೂಚನೆ ನೀಡಬೇಕೆಂದು ಬ್ಯಾಂಕಿನ ವ್ಯವಸ್ಥಾಪಕರಿಗೆ ಹೇಳಿದರು. ನಂತರ ರಸ್ತೆ ಬದಿಯಲ್ಲಿ ವ್ಯಾಪಾರ ಮಾಡುವವರು ರಸ್ತೆಗೆ ಬರದಂತೆ ನೋಡಿಕೊಂಡು ತಮ್ಮ ವ್ಯಾಪಾರ ವಹಿವಾಟು ಮಾಡಿಕೊಳ್ಳಬೇಕು. ಬೈಕ್ ಸವಾರರು, ಇತರೇ ವಾಹನದವರು ತಮ್ಮ ವಾಹನಗಳನ್ನು ಎಲ್ಲೆಂದರಲ್ಲಿ ನಿಲ್ಲಿಸದೇ ರಸ್ತೆ ನಿಯಮಗಳನ್ನು ಪಾಲಿಸುವ ಮೂಲಕ ವಾಹನ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು. ಒಂದು ವೇಳೆ ರಸ್ತೆ ನಿಯಮಗಳನ್ನು ಪಾಲಿಸದೇ ಇದ್ದರೇ ಇಲಾಖೆಯು ಕ್ರಮ ತೆಗೆದುಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಪಿಎ□□□ಗಳಾದ ರವಿ ಪವಾರ, ಎನ್.ಟಿ.ದಡ್ಡಿಮನಿ, ಸಿಬ್ಬಂದಿಗಳಾದ ವಿಜಯ ದುದಗಿ, ಜಿ.ಎಸ್. ತಕ್ಕೋಡ, ಬಸವರಾಜ ಸೇಬಗೊಂಡ, ಮಂಜು ಕಟಬರ, ಮಲ್ಲಿಕಾರ್ಜುನ ಅವಟಿ, ಅಮರೇಶ ಬಿರಾದಾರ, ಬಸನಗೌಡ ಯತ್ನಾಳ, ಚಾಂದ ಮುಲ್ಲಾ, ಬಳ್ಳೊಳ್ಳಿ ಇದ್ದರು.

### ವಚನ ಚಿಂತನ 318



ಆರರಿಂದ ಎಂಟು ತಿಂಗಳ ಭ್ರೂಣದ ಬೆಳವಣಿಗೆ

*ಷಷ್ಠಿಮಾಸಕ್ಕೆ ಕಂಧರ ಉದರ ಪುಟ್ಟುವುದು.*
*ಸಪ್ತಮಾಸಕ್ಕೆ ಗುಹ್ಯ ಪಾದ ಪುಟ್ಟುವುದು.*
*ಅಷ್ಟಮಾಸಕ್ಕೆ ಸರ್ವಾಂಗಸಂಧಿ*
*ಪುಟ್ಟುವದು ಸಂಪೂರ್ಣವಹುದು.*
*ಅಪ್ರಮಾಣಕೂಡಲಸಂಗಮದೇವಾ*
*– ಬಾಲಸಂಗಯ್ಯನವರು*

ಗರ್ಭದಲ್ಲಿ ಬೆಳೆಯುವ ಭ್ರೂಣದ ಬೆಳವಣಿಗೆಯನ್ನು ತಿಂಗಳವಾರು ಅತ್ಯಂತ ಸವಿಸ್ತಾರವಾಗಿ ಬಾಲಸಂಗಯ್ಯನ ತಮ್ಮ ವಚನಗಳಲ್ಲಿ ವಿವರಿಸಿರುವರು. ಗರ್ಭಧರಿಸಿ ಆರು ತಿಂಗಳಾದ(ಷಷ್ಠಿಮಾಸಕ್ಕೆ) ಭ್ರೂಣದ ದೈಹಿಕ ಬೆಳವಣಿಗೆಯಲ್ಲಿ ಕಂಧರ(ಕೊರಳು) ಬೆಳವಣಿಗೆ ಹೊಂದುವುದರೊಂದಿಗೆ ಹೊಟ್ಟೆಯ ಭಾಗ ಬೆಳೆಯುತ್ತದೆ. “ಷಷ್ಠಿಮಾಸಕ್ಕೆ ಕಂಧರ ಉದರ ಪುಟ್ಟುವುದು.” ವೈದ್ಯರಪ್ರಕಾರ 4 ರಿಂದ 6 ತಿಂಗಳ ಅವಧಿಯಲ್ಲಿ ಭ್ರೂಣದ ಬೆಳವಣಿಗೆಯಲ್ಲಿ ಕೈಕಾಲುಗಳು ಬೆರಳುಗಳು ಕಣ್ಣಿನ ರೆಪ್ಪೆಗಳು ಉಗುರುಗಳು ಕೂದಲುಗಳು ಹಾಗೂ ಹಲ್ಲುಗಳು ಬೆಳೆಯಲು ಪ್ರಾರಂಭಿಸುತ್ತವೆ. In the pregnancy months 4, 5, and 6 baby's fingers and toes are well-defined. His eyelids, eyebrows, eyelashes, nails, and hair are formed, and teeth and bones are becoming denser. ಬಾಲಸಂಗಯ್ಯನವರು ಗುರುತಿಸಿದಂತೆ ಏಳನೇ ತಿಂಗಳಿನಲ್ಲಿ ಭ್ರೂಣದ ಗುಹ್ಯ (ಜನನೇಂದ್ರಿಯ) ಮತ್ತು ಪಾದಗಳು ಬೆಳವಣಿಗೆ ಹೊಂದುತ್ತವೆ “ಸಪ್ತಮಾಸಕ್ಕೆ ಗುಹ್ಯ ಪಾದ ಪುಟ್ಟುವುದು.” ವೈದ್ಯರ ಪ್ರಕಾರ ಈ ಅವಧಿಯಲ್ಲಿ At the end of the seventh month of pregnancy, fat begins to be deposited on baby. baby's hearing is fully developed and he or she changes position frequently and responds to stimuli, including sound, pain, and light. ಪ್ರತಿಕ್ರಿಯೆ ವ್ಯಕ್ತಪಡಿಸುವ ಎಲ್ಲ ಅಂಗಗಳ ಬೆಳವಣಿಗೆ ಉಂಟಾಗಿ 8 ತಿಂಗಳಿಗೆ ಸಂಪೂರ್ಣವಾದ ಮಗುವಿನ ಚಿತ್ರಣ ಮೂಡುತ್ತದೆ. ಇದನ್ನು “ಅಷ್ಟಮಾಸಕ್ಕೆ ಸರ್ವಾಂಗಸಂಧಿ ಪುಟ್ಟುವದು ಸಂಪೂರ್ಣವಹುದು” ಎಂದಿದ್ದಾರೆ. ಯಾವುದೇ ಸಾಧನ-ಸಲಕರಣೆಗಳು ಇಲ್ಲದೆ ಗರ್ಭದಲ್ಲಿಯ ಭ್ರೂಣದ ಬೆಳವಣಿಗೆಯನ್ನು ನಿಖರವಾಗಿ ಗುರುತಿಸಿರುವುದು ಸೋಜಿಗ..

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ಅಕ್ರಮ ಮಣ್ಣು ಸಾಗಾಟಗಾರರ ವಿರುದ್ಧ ಕ್ರಮಕ್ಕೆ ಕರವೇ ಆಗ್ರಹ

ಉದಯರಶ್ಮಿ ನ್ಯೂಸ್



ಇಂಡಿ: ತಾಲೂಕಿನಲ್ಲಿ ಕೃಷಿಗೆ ಯೋಗ್ಯವಾದ ಮಣ್ಣಿನ ಅಕ್ರಮ ಸಾಗಾಣೆ ಧಂದೆ ಅವ್ಯಾಹತವಾಗಿ ನಡೆಯುತ್ತಿದ್ದು, ಕೂಡಲೇ ಅಕ್ರಮ ಮಣ್ಣು ಸಾಗಾಟಗಾರರ ವಿರುದ್ಧ ಕ್ರಮ ಕೈಗೊಳ್ಳಿ ಎಂದು ಕರವೇ ಸ್ವಾಭಿಮಾನ ಬಣದ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಉಪ ತಹಶಿಲ್ದಾರ ಧನಪಾಲಶೆಟ್ಟಿ ದೇವೂರ ಅವರಿಗೆ ಬುಧವಾರ ಮನವಿ ಸಲ್ಲಿಸಿದರು.

ಪಟ್ಟಣದ ಆಡಳಿತ ಸೌಧಕ್ಕೆ ತೆರಳಿದ ಕಾರ್ಯಕರ್ತರು ನದಿ ಪಾತ್ರದಲ್ಲಿನ ಮತ್ತು ರೈತರ ಜಮೀನಿನಲ್ಲಿನ ಮಣ್ಣನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿದ್ದಾರೆ. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು, ಅಕ್ರಮವಾಗಿ ಮಣ್ಣು ಸಾಗಾಟವನ್ನು ತಡೆಗಟ್ಟಬೇಕು. ಅಲ್ಲದೇ ಕಾನೂನು ಬಾಹಿರವಾಗಿ ಎಲ್ಲೆಲ್ಲಿ ಮಣ್ಣು ಶೇಖರಣೆ ಆಗಿದಿಯೋ ಅದನ್ನು ವಶಕ್ಕೆ ಪಡೆದುಕೊಂಡು ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು. ಒಂದು ವೇಳೆ ನಿರ್ಲಕ್ಷ್ಯ ತೋರಿದರೆ, ಉಗ್ರವಾದ ಹೋರಾಟಕ್ಕೆ ಸಹಕಾರ ನೀಡಿದಂತಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಕರವೇ ಸ್ವಾಭಿಮಾನ ಬಣದ ಉತ್ತರ ಕರ್ನಾಟಕ ಅಧ್ಯಕ್ಷ ಲಕ್ಷ್ಮಣ ಕೆಂಬಾಗೆ, ಜಿಲ್ಲಾಧ್ಯಕ್ಷ ಜಗದೇವ್ ಸೂರ್ಯವಂಶಿ, ತಾಲ್ಲೂಕು ಅಧ್ಯಕ್ಷ ಶಿವು ಬಡಿಗೇರ, ಗಿರೀಶ್ ಕಲಕಟ್ಟಿ, ನಿಂಗರಾಜು, ಸಂತೋಷ ಕಾಲೇಬಾಗ, ಪ್ರದೀಪ ಮೂರಮನ, ಪ್ರವೀಣ ಸುತಾರ್, ಅನುಪ್ ವಾಲಿ, ಭಾಗೇಶ ಮಲಘಾಣ, ಮಂಜುನಾಥ್ ಪಾಟೀಲ್, ಕಿರಣ ಇಂಗಳೆ, ಪಿಂಟು ಮಾನೆ, ಮಹೇಶ ಹೊಸಮನಿ, ಸಚೀನ ಹಿರೇಮಠ, ಅಜಯಸಿಂಗ್ ಕನ್ನೊಳ್ಳಿ, ತ್ರಿನೇತ್ರ ಹಿರೇಮಠ, ಗುರುಪ್ರಸಾದ್ ಪವಾರ, ಮಲ್ಲಿಕಾರ್ಜುನ ಕುಂಬಾರ, ಶೀವು ಕೋಳಿ, ಶಿವು ಬಡಿಗೇರ, ಪ್ರದೀಪ ಪವಾರ, ಮಲ್ಲು ಮೇತ್ರಿ, ಆನಂದ ದೇವರ, ಭಾಗೇಶ ತಳವಾರ, ಹಣಮಂತ ಹೋಟಗಿ, ರಜನಿಕಾಂತ್ ಕಲ್ಲೂರಕರ, ಸಂತೋಷ ಹೆಳವರ ಉಪಸ್ಥಿತರಿದ್ದರು.

## ಶಾಸಕ ಬಸನಗೌಡರಿಂದ ಅಹವಾಲು ಸ್ವೀಕಾರ

ಉದಯರಶ್ಮಿ ನ್ಯೂಸ್



ವಿಜಯಪುರ: ನಗರದ ವಿವಿಧ ವಾರ್ಡ್ ಗಳಲ್ಲಿ ಮಂಗಳವಾರ ನಡೆದ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ಭಾಗವಹಿಸಿ, ನಂತರ ಸಾರ್ವಜನಿಕರ ಅಹವಾಲು ಆಲಿಸಿದರು.

ವಾರ್ಡ್ ನಂ.21 ರಲ್ಲಿ ಬರುವ ಇಬ್ರಾಹಿಂಪುರದ ಮಲ್ಲಿಕಾರ್ಜುನ ದೇವಸ್ಥಾನ ಹತ್ತಿರ 2022-23ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಂಜೂರಿಸಿದ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದ ಬಳಿಕ, ಸನ್ ಶೈನ್ ಸಿಟಿಯಲ್ಲಿ ರೂ.1 ಕೋಟಿ ಅನುದಾನದಲ್ಲಿ ಆಂತರಿಕ ಸಿಸಿ ರಸ್ತೆ ಅಭಿವೃದ್ಧಿ ಪಡಿಸುವ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ವಾರ್ಡ್ ನಂ.28ರ ಸರ್. ಎಂ.ವಿಶ್ವೇಶ್ವರಯ್ಯ ರಸ್ತೆಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಗಂಡು ಮಕ್ಕಳ ಶಾಲೆ ನಂ.13 ರಲ್ಲಿ ವಿವೇಕ ಯೋಜನೆಯಡಿ ಮಂಜೂರಿಸಿ, ನಿರ್ಮಾಣ ಮಾಡಲಾದ ಶಾಲಾ ಕೊಠಡಿ ಉದ್ಘಾಟಿಸಿ, ನಂತರ ವಾರ್ಡ್ ನಂ.29ರ ರಾಜಾಜಿನಗರದ ನಮ್ಮ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ನಂ.40 ರಲ್ಲಿ ವಿವೇಕ ಯೋಜನೆಯಡಿ ಮಂಜೂರಿಸಿ, ನಿರ್ಮಾಣ ಮಾಡಲಾದ ಎರಡು ಶಾಲಾ ಕೊಠಡಿಗಳನ್ನು ಉದ್ಘಾಟಿಸಿದರು.

ಪ್ರತಿ ಕಾರ್ಯಕ್ರಮದ ಬಳಿಕ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿದ ಶಾಸಕರು, ಹಲವು ಸಮಸ್ಯೆಗಳಿಗೆ ಸ್ಥಳದಲ್ಲೇ ಸಂಬಂಧಿಸಿದವರ ಮೂಲಕ ಪರಿಹಾರ ಕಲ್ಪಿಸಿದರು. ಉಳಿದವುಗಳಿಗೆ ಪರಿಹರಿಸುವ ಭರವಸೆ ನೀಡಿದರು.

ಮಹಾನಗರ ಪಾಲಿಕೆ ಸದಸ್ಯರಾದ ಮಲ್ಲಿಕಾರ್ಜುನ ಗಡಗಿ, ಪ್ರೇಮಾನಂದ ಬಿರಾದಾರ ಸೇರಿದಂತೆ ಮುಖಂಡರು, ಶಿಕ್ಷಣ ಇಲಾಖೆ ಅಧಿಕಾರಿಗಳು, ಶಿಕ್ಷಕರು, ಮಕ್ಕಳು ಹಾಗೂ ಸ್ಥಳೀಯ ನಿವಾಸಿಗಳು ಭಾಗವಹಿಸಿದ್ದರು.

ಯೋಜನೆ ಕೈಬಿಡದಿದ್ದರೆ ತೀವ್ರಗೊಳ್ಳಲಿರುವ ಮೀನುಗಾರರ ಪ್ರತಿಭಟನೆ । ಡಾ.ಡಾ.ಗೌತಮ್ ಚೌಧರಿ ಎಚ್ಚರಿಕೆ

## ಕಡಲಮಕ್ಕಳ ಬದುಕು ಮುಳುಗಿಸಿದ ಬಂದರು ಯೋಜನೆ

ಉದಯರಶ್ಮಿ ನ್ಯೂಸ್



ವಿಜಯಪುರ: ಹೊನ್ನಾವರದ ಬಂದರು ಯೋಜನೆ ಕಡಲಮಕ್ಕಳ ಬದುಕನ್ನೇ ಮುಳುಗಿಸುತ್ತಿದ್ದರೂ ರಾಜ್ಯ ಸರಕಾರ ಮಾತ್ರ ಬಡ ಮೀನುಗಾರರ ಕುಟುಂಬಗಳ ಅಸ್ತಿತ್ವಕ್ಕೇ ಧಕ್ಕೆ ತರುತ್ತಿರುವ ಈ ಯೋಜನೆ ಕೈಬಿಡದಿರುವುದು ಖಂಡನೀಯವೆಂದು ರಾಷ್ಟ್ರೀಯ ಮೀನುಗಾರರ ಸಂಘದ ರಾಷ್ಟ್ರೀಯ ಉಪಾಧ್ಯಕ್ಷ ಡಾ.ಗೌತಮ್ ಆರ್ ಚೌಧರಿ ಹೇಳಿದ್ದಾರೆ.

ನಗರದಲ್ಲಿ ಬುಧವಾರ ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಹೊನ್ನಾವರ ಬಂದರು ಯೋಜನೆಯಿಂದ ಸುಮಾರು 6,000 ಮೀನುಗಾರರ ಕುಟುಂಬಗಳು ಮತ್ತು ಒಟ್ಟು ಸುಮಾರು 23,500 ಮೀನುಗಾರರ ಬದುಕು ಕೊಚ್ಚಿ ಹೋಗುವ ಆತಂಕ ಎದುರಾಗಿದೆ. ಬಂದರು ಬೇಡ ಅಂತ ಅದೆಷ್ಟೋ ಪ್ರತಿಭಟನೆಗಳು ನಡೆದರೂ ಸರ್ಕಾರ ಮಾತ್ರ ಕ್ಯಾರೇ ಎನ್ನುತ್ತಿಲ್ಲ. ಈ ಬಾರಿ ಬಜೆಟ್‌ನಲ್ಲಿ ಸಿಎಂ ಸಿದ್ದರಾಮಯ್ಯ ಮೀನುಗಾರರಿಗೋಸ್ಕರ ಸಾಕಷ್ಟು ಯೋಜನೆಗಳನ್ನು ಮಾಡಿದ್ದೇವೆ ಅಂದರು. ಅದು ಇದೇನಾ? ಅನ್ನೋ ಪ್ರಶ್ನೆ ಎದ್ದಿದೆ. ಹೊಸ ಬಂದರು ನಿರ್ಮಾಣ ಮತ್ತು ಅದಕ್ಕೆ ಸಂಪರ್ಕ ಕಲ್ಪಿಸಲು ರಸ್ತೆಗಾಗಿ ಸಾವಿರಾರು ಮೀನುಗಾರರ ಬದುಕಿನ ಮೇಲೆಯೇ ಚಪ್ಪಡಿ ಎಳೆಯುವ ಕಾರ್ಯ ಭರದಿಂದ ಸಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

2010ರಲ್ಲಿಯೇ ಬಂದರು ನಿರ್ಮಾಣದ ಕುರಿತು ಕರ್ನಾಟಕ ಸರ್ಕಾರ ಮತ್ತು ಖಾಸಗಿ ಸಂಸ್ಥೆ ನಡುವೆ ಒಪ್ಪಂದ ಏರ್ಪಟ್ಟಿತ್ತು. ಆಗಿನಿಂದಲೂ ಸ್ಥಳೀಯ ಮೀನುಗಾರರು ಈ ಯೋಜನೆಯ ವಿರುದ್ಧ ಹೋರಾಟ ನಡೆಸುತ್ತಲೇ ಇದ್ದಾರೆ. 2016ರಲ್ಲಿ ಜಿಲ್ಲಾಧಿಕಾರಿಗಳ ನ್ಯಾಯಾಲಯ, ಯೋಜನೆಗಾಗಿ ಮೀನುಗಾರರ ಎತ್ತಂಗಡಿ ಮಾಡುವಂತೆ ಆದೇಶಿಸಿದ ಬಳಿಕ ಹೋರಾಟ ತೀವ್ರಗೊಂಡಿದೆ. 8 ವರ್ಷಗಳಿಂದ ಹೋರಾಟ ನಡೆಯುತ್ತಲೇ ಇದೆ. ಇದಕ್ಕೆ ಸಿಎಂ ಸಿದ್ದರಾಮಯ್ಯ ಮಾತ್ರ ಕ್ಯಾರೇ ಅನ್ನುತ್ತಿಲ್ಲ. ಪ್ರತಿಭಟನೆ ಮಾಡ್ತಿರೋ ಮೀನುಗಾರರ ಮೇಲೆ ಸುಳ್ಳು ಆರೋಪ ಮಾಡಿ ಕೇಸ್ ದಾಖಲಿಸಲಾಗ್ತಿದೆ. ಸರ್ಕಾರ ಪೊಲೀಸರ ಮೂಲಕ ಹೋರಾಟ ಹತ್ತಿಕ್ಕಲು ನಡೆಸುವ ಪ್ರಯತ್ನಗಳು ನಮ್ಮನ್ನು ಹಿಮ್ಮೆಟ್ಟಿಸಲಾರವು. ಈ ಕೂಡಲೇ ಸರ್ಕಾರ ಇತ್ತ ಗಮನ ಹರಿಸಿ, ಸಮಸ್ಯೆ ಬಗೆಹರಿಸಬೇಕು. ಇಲ್ಲದಿದ್ರೆ ಮೀನುಗಾರರ ಹೋರಾಟ ಮತ್ತಷ್ಟು ತೀವ್ರಗೊಳ್ಳಲಿದೆ. ಈ ಬಂದರು ಯೋಜನೆಯಿಂದ ಕೇವಲ ಮೀನುಗಾರರಿಗಷ್ಟೇ ಅಲ್ಲ, ಆಲಿವ್ ರಿಡ್ಲೆ ಆಮೆಗಳು ಸೇರಿದಂತೆ ಅಪರೂಪದ ಪ್ರಭೇದಗಳ ವಿನಾಶಕ್ಕೆ ಕಾರಣವಾಗಲಿದೆ ಎಂದು ಡಾ.ಗೌತಮ್ ಆರ್ ಚೌಧರಿ ಎಚ್ಚರಿಸಿದ್ದಾರೆ.

ಬೆಂಗಳೂರಿನ ಹೊಟೇಲ ಉದ್ಯಮಿ ಮಂಜುನಾಥ, ಸೋಮು ಚವಡೀಕರ ಸೇರಿದಂತೆ ಹಲವರಿದ್ದರು.

# ಮಾ.08 ರಂದು ಪ್ರಶಸ್ತಿ ಪ್ರಧಾನ, ಚಿತ್ರಕಲಾ ಪ್ರದರ್ಶನ, ಕೃತಿ ಬಿಡುಗಡೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘ ಮತ್ತು ಕರ್ನಾಟಕ ಛಾಯಾಚಿತ್ರಗ್ರಾಹಕರ ಸಂಘ (ರಿ), ಬೆಂಗಳೂರು ಇವರ ಸಹಯೋಗದಲ್ಲಿ ಮಾ.08 ರಂದು ವಿಜಯಪುರದ ಸರಕಾರಿ ಆರ್ಟ ಗ್ಯಾಲರಿಯಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಛಾಯಾಗ್ರಹಣ ಕ್ಷೇತ್ರದಲ್ಲಿರುವ ಮಹಿಳೆಯರಿಗೆ ಜಿಲ್ಲಾ ಛಾಯಾಸಾಧಕಿ ಪ್ರಶಸ್ತಿ ಪ್ರಧಾನ ಸಮಾರಂಭ ಮತ್ತು ಚಿತ್ರಕಲಾ ಪ್ರದರ್ಶನ, ಹಾಗೂ ಡಾ. ಎಸ್.ಟಿ. ಮೇರವಾಡೆ ರಚಿಸಿದ "ಆಭರಣ" ಪುಸ್ತಕ ಬಿಡುಗಡೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮವನ್ನು ವಿಜಯಪುರದ ಉಪವಿಭಾಗಾಧಿಕಾರಿಗಳು ಹಾಗೂ ಉಪವಿಭಾಗೀಯ ದಂಡಾಧಿಕಾರಿ ಶ್ವೇತಾ ಮೋಹನ ಬೀಡಿಕರರವರು ಉದ್ಘಾಟಿಸಿ ಪುಸ್ತಕ ಬಿಡುಗಡೆಮಾಡುವರು. ಮುಖ್ಯ ಅತಿಥಿಗಳಾಗಿ ವಿಜಯಪುರದ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ ಭಜಂತ್ರಿ ಹಾಗೂ ಹಿರಿಯ ಕಲಾವಿದ ವಿದ್ಯಾಧರ ಸೋ. ಸಾಲಿಯವರು ಆಗಮಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಾಣಕ್ಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಸ್. ಟಿ. ಮೇರವಾಡೆಯವರು ವಹಿಸಿಕೊಳ್ಳಲಿದ್ದಾರೆ. ಕಾರ್ಯಕ್ರಮದಲ್ಲಿ ವಿಜಯಪುರ ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ರಮೇಶ ಚವ್ಹಾಣ ಉಪಸ್ಥಿತರಿರುವರು.

ಛಾಯಾಗ್ರಹಣ ಕ್ಷೇತ್ರದಲ್ಲಿರುವ ಮಹಿಳೆಯರಿಗೆ ಜಿಲ್ಲಾ ಛಾಯಾಸಾಧಕಿ ಪ್ರಶಸ್ತಿಯನ್ನು

ಶಶಿಕಲಾ ರಮೇಶ ಮೈದರಗಿ, ಶಾರದಾ ಹಣಮಂತ ನಂದವಾಡಗಿ, ಅಶ್ವಿನಿ ಮೋಹನ ಉಪಾಧ್ಯೆ, ಗೀತಾ ಕೃಷ್ಣಾ ರಾಠೋಡ, ಚಂದ್ರಕಲಾ ಮಂಜುನಾಥ ತುಕೋಳ, ಶ್ವೇತಾ ಪರಶುರಾಮ ಅರಕೇರಿ, ಶೋಭಾ ಅನಿಲ್ ಹಿರೋಳ್ಳಿ ಇವರಿಗೆ ವಿತರಿಸಲಾಗುವುದು.

ಚಿತ್ರಕಲಾ ಪ್ರದರ್ಶನದಲ್ಲಿ

ಡಾ. ಶಶಿಕಲಾ ಹೂಗಾರ, ದಾಕ್ಷಾಯಣಿ ಇಮನಾದ, ಗಿರಿಜಾ ಬಿರಾದಾರ ಇವರ ಕಲಾಕೃತಿಗಳನ್ನು ಪ್ರದರ್ಶಿಸಲಿದ್ದಾರೆ ಎಂದು ಸಂಘದ ಕಾರ್ಯದರ್ಶಿ ಸತೀಶ ಕಲಾಲ ತಿಳಿಸಿದ್ದಾರೆ.

# ಮಾ.10ರಂದು ಸ್ವಾಸ್ಥ್ಯ ಸಂತುಲನ ರಂಗೋಲಿ ಮಹೋತ್ಸವ

**ಉದಯರಶ್ಮಿ ನ್ಯೂಸ್**



ವಿಜಯಪುರ: ನಗರದ ಪ್ರತಿಷ್ಠಿತ ಬಿ.ಎಲ್.ಡಿ.ಇ ಸಂಸ್ಥೆಯ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರ ವಿವಿಯ ಕುಲಾಧಿಪತಿಗಳಾದ ಡಾ. ಎಂ. ಬಿ. ಪಾಟೀಲ ಅವರ ಮಾರ್ಗದರ್ಶನದಲ್ಲಿ ವೈದ್ಯಕೀಯ ಶಿಕ್ಷಣಕ್ಕೆ ಪೂರಕವಾಗಿ ಹೊಸ ಹೊಸ ಪ್ರಯತ್ನಗಳಿಗೆ ಮುನ್ನುಡಿ ಬರೆಯುತ್ತಿದ್ದು, ಜನಪರ ಸೇವೆಗಳ ಮೂಲಕ ದೇಶಾದ್ಯಂತ ಗಮನ ಸೆಳೆಯುತ್ತಿದೆ.

ಇಂಥ ಚಟುವಟಿಕೆಗಳಿಗೆ ಈಗ ಮತ್ತೊಂದು ಸೇರ್ಪಡೆ ಇದೇ ತಿಂಗಳು 10.04.2024ರಂದು ರವಿವಾರ ಬೆಳಿಗ್ಗೆ 7 ಗಂಟೆಗೆ ಆಯೋಜಿಸಿರುವ ಸ್ವಾಸ್ಥ್ಯ ಸಂತುಲನ ರಂಗೋಲಿ ಮಹೋತ್ಸವ ಕಾರ್ಯಕ್ರಮ. ವೈದ್ಯಕೀಯ ಶಿಕ್ಷಣದ ವಿಷಯದ ಮೇಲೆ ಇದೇ ಮೊದಲ ಬಾರಿಗೆ ದೊಡ್ಡ ಪ್ರಮಾಣದ ಕಾರ್ಯಕ್ರಮ ಇದಾಗಿದ್ದು, ಇದು ಗಿನ್ನೀಸ್ ಬುಕ್ ಆಫ್ ರೆಕಾರ್ಡ್ಸ್, ಲಂಡನ್ ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್, ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್, ಎಲೈಟ್ ವರ್ಲ್ಡ್ ರೆಕಾರ್ಡ್ಸ್, ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ನಲ್ಲಿ ದಾಖಲಾಗುವ ನಿಟ್ಟಿನಲ್ಲಿ ಮಹತ್ವ ಹೆಜ್ಜೆಯಾಗಿದೆ.

ಈ ಕಾರ್ಯಕ್ರಮದಲ್ಲಿ 1500ಕ್ಕೂ ಹೆಚ್ಚು ಜನ ವೈದ್ಯಕೀಯ ವಿದ್ಯಾರ್ಥಿಗಳು 50000 ಚದುರ ಅಡಿ ಪ್ರದೇಶದಲ್ಲಿ ವೈದ್ಯಕೀಯ ಶಿಕ್ಷಣ ಪಠ್ಯಕ್ಕೆ ಪೂರಕವಾದ 250 ಚಿತ್ರಗಳನ್ನು ರಂಗೋಲಿ ಮೂಲಕ ಬಿಡಿಸಲಿದ್ದಾರೆ. 40 ಜನ ಮಾರ್ಗದರ್ಶಕರು ಮತ್ತು 20 ಜನ ಮೇಲ್ವಿಚಾರಕರು ಇದರ ಉಸ್ತುವಾರಿ ವಹಿಸಲಿದ್ದಾರೆ. ಇದಕ್ಕಾಗಿ 10 ಟನ್ ರಂಗೋಲಿ ಬಳಕೆಯಾಗುತ್ತಿದೆ. 10ಥ12 ಅಡಿಯ ರಂಗೋಲಿ ಚಿತ್ರಗಳನ್ನು ಬಿಡಿಸಲಾಗುವುದು.

ವೈದ್ಯಕೀಯ ಶಿಕ್ಷಣದ ಬೋಧನೆ, ಆರೋಗ್ಯದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಮತ್ತು ವಿದ್ಯಾರ್ಥಿಗಳಿಗೆ ಚಿತ್ರಬಿಡಿಸುವ ಕೌಶಲ್ಯಾಭಿವೃದ್ಧಿ ಪಡಿಸುವುದು ಮತ್ತು ಆರೋಗ್ಯದ ಬಗ್ಗೆ ರಂಗೋಲಿಯ ಕಲೆಗೆ ಪ್ರೋತ್ಸಾಹ ನೀಡುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ.

ಈ ಕಾರ್ಯಕ್ರಮದ ಮೂಲಕ ಬೃಹತ್ ಪ್ರಮಾಣದಲ್ಲಿ ರಂಗೋಲಿ ಬಿಡಿಸುವ ಮೂಲಕ ವೈದ್ಯಕೀಯ ಶಿಕ್ಷಣದಲ್ಲಿ ಹೊಸ ಮೈಲುಗಲ್ಲು ಸ್ಥಾಪಿಸಲಾಗುತ್ತಿದೆ. ಅಲ್ಲದೇ, ಇದು ಗಿನ್ನೀಸ್ ಬುಕ್ ಆಫ್ ರೆಕಾರ್ಡ್ಸ್, ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್, ಇಂಡಿಂ-ಯಾ ಬುಕ್ ಆಫ್ ರೆಕಾರ್ಡ್ಸ್, ಎಲೈಟ್ ವರ್ಲ್ಡ್ ರೆಕಾರ್ಡ್ಸ್, ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ನಲ್ಲಿ ಸೇರ್ಪಡೆಯತ್ತ ಮಹತ್ವದ ಹೆಜ್ಜೆಯಾಗಿದೆ.

ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷರು, ಡೀಮ್ಡ್ ವಿವಿ ಕುಲಾಧಿಪತಿಗಳೂ ಆಗಿರುವ ಶ್ರೀ ಎಂ. ಬಿ.ಪಾಟೀಲ ಅವರು ಮಾ. 10 ರಂದು ರವಿವಾರ ಬೆಳಿಗ್ಗೆ 9.30ಕ್ಕೆ ಈ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ವಿವಿಯ ಎಲ್ಲ ಹಿರಿಯ ಅಧಿಕಾರಿಗಳು, ವಿದ್ಯಾರ್ಥಿಗಳು ಮತ್ತು ವೈದ್ಯಕೀಯ ಕ್ಷೇತ್ರದ ಗಣ್ಯರು ಉಪಸ್ಥಿತರಿರಲಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಡಾ.ಆರ್. ಎಸ್. ಮುಧೋಳ, ಕುಲಪತಿಗಳು, ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ, ಡಾ. ಅರವಿಂದ ಪಾಟೀಲ, ಪ್ರಾಚಾರ್ಯರು, ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರ, ಡಾ.ಸುಮಂಗಲಾ ಪಾಟೀಲ, ಉಪಪ್ರಾಚಾರ್ಯರು, ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರ, ಡಾ.ದೀಪಕಕುಮಾರ ಚವ್ಹಾಣ, ಸಹ ಪ್ರಾಧ್ಯಾಪಕರು ಮತ್ತು ಐಟಿ ವಿಭಾಗದ ಮುಖ್ಯಸ್ಥರು, ಬಿ.ಎಲ್.ಡಿ.ಇ ವಿಶ್ವವಿದ್ಯಾಲಯ, ಡಾ.ನಂದಿನಿ ಮುಚ್ಚಂಡಿ, ಕಾರ್ಯಕ್ರಮ ಸಂಯೋಜಕರು ಮತ್ತು ಬಯೋಕೆಮೆಸ್ಟ್ರಿ ವಿಭಾಗ ಇದ್ದರು.

ಡಾ. ಉದಯಕುಮಾರ ಪಾಟೀಲ ವಂದಿಸಿದರು.

# ಮಾ.8ರಂದು ನವೀಕರಣಗೊಂಡ ಅಮರ ಗಣಾಧೀಶ್ವರ ದೇವಾಲಯ ಉದ್ಘಾಟನೆ

**ಉದಯರಶ್ಮಿ ನ್ಯೂಸ್**



ವಿಜಯಪುರ: ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ನಗರದ 770 ಅಮರ ಗಣಾಧೀಶ್ವರರ (ಅಮರಗಣಂಗಳ) ದೇವಾಲಯದ ನವೀಕರಣ ಮತ್ತು ಲಿಂಗಗಳ ಪುನರುಜ್ಜೀವನ ಕಾರ್ಯ ಪೂರ್ಣಗೊಂಡಿದ್ದು, ಉದ್ಘಾಟನೆ ಕಾರ್ಯಕ್ರಮ ಮಾ.8 ರಂದು ಶುಕ್ರವಾರ ಮಹಾಶಿವರಾತ್ರಿ ದಿನ ನಡೆಯಲಿದೆ.

ಅಂದು ಬೆಳಿಗ್ಗೆ 10.30 ಕ್ಕೆ ನಡೆಯಲಿರುವ ಕಾರ್ಯಕ್ರಮದಲ್ಲಿ ಬಿ.ಎಲ್.ಡಿ.ಇ ಸಂಸ್ಥೆ ಅಧ್ಯಕ್ಷ, ಕೈಗಾ-ರಿಕೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಉದ್ಘಾಟನೆ ನೆರವೇರಿಸಲಿದ್ದಾರೆ. ಈ ಸಂದರ್ಭದಲ್ಲಿ ಶ್ರೀ ಸಿದ್ದೇಶ್ವರ ಸಂಸ್ಥೆಯ ಅಧ್ಯಕ್ಷ ಮತ್ತು ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಉಪಸ್ಥಿತರಿರಲಿದ್ದಾರೆ.

ಬಂಥನಾಳ ಶ್ರೀ ಸಂಗನಬಸವ ಮಹಾಶಿವಯೋಗಿಗಳ ದಿವ್ಯ ಸಂಕಲ್ಪದಂತೆ 1954 ರಲ್ಲಿ ನಗರದ 770 ಅಮರ ಗಣಾಧೀಶ್ವರರ(ಅಮರಗಣಂಗಳ) ಸ್ಮಾರಕ ಲಿಂಗಗಳ ದೇವಾಲಯದ ಪ್ರತಿಷ್ಠಾಪನೆ ನಡೆದಿತ್ತು. ಈ ದೇವಾಲಯ ಪೂರ್ಣಗೊಂಡ ಬಳಿಕ 15.01.1960ರಲ್ಲಿ ವಿಜ್ರಂಬಣೆಯಿಂದ ಲೋಕಾರ್ಪಣೆಯಾಯಿತು.

12 ನೇ ಶತಮಾನದಲ್ಲಿ 770 ಅಮರಗಣಂಗಳ(ಶರಣರ)ರು ಬಸವೇಶ್ವರ ಜೊತೆಗೂಡಿ ಸಾಮಾಜಿಕ ಮೌಢ್ಯಗಳನ್ನು ಹೋಗಲಾಡಿಸಿ, ಸಮಾನತೆಗಾಗಿ ಶ್ರಮಿಸಿದ್ದರು. ಸಮಾಜಕ್ಕೆ ಅವರು ನೀಡಿದ ಕೊಡುಗೆಯ ಸ್ಮರಣಾರ್ಥ ಅವರ ಹೆಸರಿನಲ್ಲಿಯೇ 770 ದಂಪತಿ ತಲಾ ರೂ.151 ಭಕ್ತಿ ಸಮರ್ಪಿಸಿ ಲಿಂಗ ಪ್ರತಿಷ್ಠಾಪನೆಯಲ್ಲಿ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಅನ್ನ ಸಂತರ್ಪಣೆ, ಶಿವಧ್ಯಾನ, ಶಿವಸ್ತೋತ್ರ, ಮಂತ್ರ ಘೋಷಣೆಗಳ ಮಧ್ಯೆ ಅಂದು ಅದ್ದೂರಿ ಕಾರ್ಯಕ್ರಮ ನಡೆದಿತ್ತು. ಅಂದಿನ ಮೈಸೂರು ಮಹಾರಾಜರು ಬಬಲೇಶ್ವರ ಶಾಂತವೀರ ಮಹಾಸ್ವಾಮೀಜಿ, ಚಿತ್ರದುರ್ಗ, ಸಿದ್ದಗಂಗಾ ಮತ್ತು ಸುತ್ತೂರು ಸೇರಿದಂತೆ ನಾನಾ ಸುಕ್ಷೇತ್ರಗಳ ಮಠಾಧೀಶರು ಪಾಲ್ಗೊಂಡಿದ್ದು ವಿಶೇಷವಾಗಿತ್ತು. ನಂತರ ಈ ದೇವಸ್ಥಾನ ವಿಜಯಪುರ ನಗರದ ಪ್ರಮುಖ ಧಾರ್ಮಿಕ ಕೇಂದ್ರಗಳಲ್ಲಿ ಒಂದಾಗಿತ್ತು.

ಕಳೆದ ವರ್ಷ ಮಹಾಶಿವರಾತ್ರಿ ಸಂದರ್ಭದಲ್ಲಿ ದರ್ಶನಕ್ಕೆ ಆಗಮಿಸಿದ್ದ ಬಿ.ಎಲ್.ಡಿ.ಇ ಸಂಸ್ಥೆ ಅಧ್ಯಕ್ಷ ಎಂ.ಬಿ.ಪಾಟೀಲ ಅವರು ದೇವಸ್ಥಾನದ ಗೋಡೆಗಳು, ಮೇಲ್ಛಾವಣಿ ಮತ್ತು ಲಿಂಗಗಳ ನವೀಕರಣ ಮತ್ತು ಪುನರುಜ್ಜೀವನ ಅಗತ್ಯವಿರುವದನ್ನು ಮನಗಂಡು ದುರಸ್ಥಿಗೆ ಕ್ರಮ ಕೈಗೊಂಡಿದ್ದರು. ಅದರಂತೆ ಈಗ ರೂ.1.51 ಕೋಟಿ ವೆಚ್ಚದಲ್ಲಿ ದೇವಸ್ಥಾನದ ಮೇಲ್ಛಾವಣಿ ಹಾಗೂ ಗೋಡೆಗಳನ್ನು ನವೀಕರಣ ಮಾಡಲಾಗಿದೆ. ಅಲ್ಲದೇ, ಒಳಾಂಗಣದಲ್ಲಿ ಪೂಜಾ ಕಟ್ಟೆಯ ಮೇಲೆ ಪ್ರತಿಷ್ಠಾಪಿಸಲಾಗಿದ್ದ ಎಲ್ಲ 770 ಲಿಂಗಗಳನ್ನು ಬದಲಾವಣೆ ಮಾಡಲಾಗಿದೆ. ಕಾರ್ಕಳದ ಕೃಷ್ಣ ಶಿಲೆಯಲ್ಲಿ ತಯಾರಾದ 770 ಹೊಸ ಲಿಂಗಗಳನ್ನು ಪ್ರತಿಷ್ಠಾಪಿಸಲಾಗಿದೆ. ಅಲ್ಲದೇ, ಒಳಾಂಗಣದ ಗೋಡೆ ಮತ್ತು ನೆಲಹಾಸುಗಳನ್ನು ಗ್ರಾನೈಟ್ ಬಳಸಿ, ನವೀಕರಿಸಲಾಗಿದೆ. ಜೊತೆಗೆ ಈ ಹಿಂದೆ 770 ಲಿಂಗಗಳ ಪ್ರತಿಷ್ಠಾಪನೆ ಮಾಡಿಸಿದ ದಂಪತಿಯ ಹೆಸರುಳ್ಳ ನಾಮಫಲಕಗಳನ್ನೂ ಬದಲಾಯಿಸಲಾಗಿದೆ.

ದೇವಸ್ಥಾನದ ಹೊರ ಆವರಣದಲ್ಲಿ ಖಾಲಿಯಿದ್ದ ಸುಮಾರು 30 ಗುಂಟೆ ಜಮೀನನ್ನು ಅಭಿವೃದ್ಧಿ ಪಡಿಸಲಾಗಿದ್ದು, 30 ನಾನಾ ಬಗೆಯ ಹೂವಿನ ಗಿಡಗಳನ್ನು ನೆಡಲಾಗಿದೆ. ಮಹಾರಾಷ್ಟದ ಪುಣೆಯಿಂದ ತರಿಸಲಾದ ಮತ್ತು ವರ್ಷವಿಡೀ ದೇವಸ್ಥಾನದ ಪೂಜೆಗೆ ಅಗತ್ಯವಾದ ಮತ್ತು ಸಾಕಾಗುವಷ್ಟು ಪ್ರಮಾಣದ ಹೂವುಗಳನ್ನು ಬೆಳೆಯುವ ವ್ಯವಸ್ಥೆ ಮಾಡಲಾಗಿದೆ. ರುದ್ರಾಕ್ಷಿ, ನಾಗಲಿಂಗ ಪುಷ್ಪ ಸೇರಿದಂತೆ ಅನೇಕ ಅಲಂಕಾರಿಕ ಹೂವಿನ ಗಿಡಗಳನ್ನು ಇಲ್ಲಿ ನೆಡಲಾಗಿದೆ. ಅಷ್ಟೇ ಅಲ್ಲ, ಸುಮಾರು 5000 ಚದುರ ಅಡಿ ಪ್ರದೇಶದಲ್ಲಿ ಹುಲ್ಲುಗಾವಲು (ಗಾರ್ಡನ್) ನಿರ್ಮಿಸಲಾಗಿದೆ.

ಮಹಾಶಿವರಾತ್ರಿ ಶುಭ ದಿನದಂದು ನಸುಕಿನ ಜಾವ ನಾನಾ ಧಾರ್ಮಿಕ ಪೂಜಾ ಕೈಂಕರ್ಯಗಳು ನಡೆಯಲಿದ್ದು, ಬೆಳಿಗ್ಗೆ 10.30ಕ್ಕೆ ಸಚಿವ ಎಂ.ಬಿ.ಪಾಟೀಲ ಅವರು ನವೀಕರಣಗೊಂಡ ಈ ದೇವಸ್ಥಾನವನ್ನು ಲೋಕಾರ್ಪಣೆ ಮಾಡುತ್ತಿರುವುದು ಶಿವಭಕ್ತರಲ್ಲಿ ಸಂತಸವನ್ನುಂಟು ಮಾಡಿದೆ.

# ಮಾ.9ರಂದು ಬಬಲೇಶ್ವರ ತಾಲೂಕು ಆಡಳಿತ ಸೌಧ ಉದ್ಘಾಟನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅವರು ಮಾರ್ಚ್ 9 ಶನಿವಾರ ಬಬಲೇಶ್ವರ ಪಟ್ಟಣಕ್ಕೆ ಭೇಟಿ ನೀಡಲಿದ್ದು, ತಾಲೂಕು ಆಡಳಿತ ಸೌಧ(ಮಿನಿ ವಿಧಾನಸೌಧ) ನೂತನ ಕಟ್ಟಡ ಉದ್ಘಾಟಿಸಲಿದ್ದಾರೆ. ಅಲ್ಲದೇ, ಸರಕಾರದ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ.

ಬೆಳಿಗ್ಗೆ 11ಗಂ. ಬಬಲೇಶ್ವರ ಪಟ್ಟಣದ ಅಡವಿಸಂಗಾಪುರ ರಸ್ತೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಅಂದಾಜು ರೂ.10 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಆಡಳಿತ ಸೌಧ (ಮಿನಿ ವಿಧಾನಸೌಧ) ನೂತನ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ.

ಈ ಕಟ್ಟಡದ ನೆಲಮಹಡಿಯಲ್ಲಿ ತಹಸೀಲ್ದಾರ ಕಚೇರಿ, ಕೋರ್ಟ್ ಹಾಲ್, ತಹಸೀಲ್ದಾರ ಗ್ರೇಡ್-1 ಮತ್ತು ಗ್ರೇಡ್-2, ಸ□□□ರಜಿಸ್ಟಾರ್ ಕಚೇರಿ, ಸಬ್ ಟ್ರೆಜರಿ ಕಚೇರಿ, ಸ್ಟ್ರಾಂಗ್ ರೂಂ, ರಜಿಸ್ಟಾರ್ ಕಚೇರಿಗಳನ್ನು ಹೊಂದಿವೆ. ಮೊದಲನೇ ಮಹಡಿಯಲ್ಲಿ ಭೂಮಾಪನಾ ಇಲಾಖೆ ಉಪನಿರ್ದೇಶಕ ಕಚೇರಿ, ಭೂ ದಾಖಲೆ ಕೋಣೆ, ವಿಡಿಯೋ ಸಂವಾದ ಸಭಾಂಗಣ, ಕೆಸ್ವಾನ್, ಚುನಾವಣೆ ಕೊಠಡಿ ಹೊಂದಿದ್ದರೆ, ಎರಡನೇ ಮಹಡಿಯಲ್ಲಿ ಸ್ಟೇ□□□ಕೇಸ್ ಮುಖ್ಯ ಕೋಣೆ ಮತ್ತು ಲಿಫ್ಟ್ ಕೋಣೆ ಇರಲಿದೆ.

ಇದೇ ವೇಳೆ ತಾಲೂಕು ಮತ್ತು ಪಟ್ಟಣ ಪಂಚಾಯಿತಿಯ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವರು ಚಾಲನೆ ನೀಡಲಿದ್ದಾರೆ.

ಇದಾದ ಬಳಿಕ ಮಧ್ಯಾಹ್ನ 12ಗಂ. ಆಯೋಜಿಸಲಾಗಿರುವ ಬಬಲೇಶ್ವರ-ತಿಕೋಟಾ ತಾಲೂಕುಗಳ ರಾಜ್ಯ ಸರಕಾರದ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶವನ್ನು ಸಚಿವ ಎಂ.ಬಿ.ಪಾಟೀಲ ಉದ್ಘಾಟಿಸಲಿದ್ದಾರೆ.

ಸರಕಾರದ ಪಂಚ ಗ್ಯಾರಂಟಿ ಯೋಜನೆಯಡಿ ಬಬಲೇಶ್ವರ-ತಿಕೋಟಾ ತಾಲೂಕುಗಳಲ್ಲಿ ಗೃಹಲಕ್ಷ್ಮಿ ಯೋಜನೆಯಡಿ 60 ಸಾವಿರ, ಗೃಹ ಜ್ಯೋತಿ ಯೋಜನೆಯಡಿ 40 ಸಾವಿರ, ಅನ್ನಭಾಗ್ಯ ಯೋಜನೆಯ ಸುಮಾರು 60 ಸಾವಿರ, ಶಕ್ತಿ ಯೋಜನೆಯಡಿ ಸಹಸ್ರಾರು ಮಹಿಳೆಯರು ಮತ್ತು ಯುವನಿಧಿ ಯೋಜನೆಯಡಿ 773 ಫಲಾನುಭವಿಗಳು ಲಾಭ ಪಡೆದಿದ್ದಾರೆ.

ಶನಿವಾರ ನಡೆಯಲಿರುವ ಸಮಾವೇಶದಲ್ಲಿ ಸರಕಾರದ ಪಂಚ ಗ್ಯಾರಂಟಿ ಯೋಜನೆಗಳಡಿ ಲಾಭ ಪಡೆದ ಫಲಾನುಭವಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಸಚಿವ ಕಚೇರಿ ಪ್ರಕಟಣೆಯಲ್ಲಿ ಮಾಹಿತಿ ನೀಡಲಾಗಿದೆ.

# ಶಿವನ ಭಜಿಸೋ, ಹರನ ಪೂಜಿಸೋ, ಲಿಂಗವೇ ತಾನಾಗಿ ಲಿಂಗವ, ಶಿವನೇ ತಾನಾಗಿ ಶಿವನ ಭಜಿಸುವುದೇ ಮಹಾಶಿವರಾತ್ರಿ

**ಉದಯರಶ್ಮಿ ದಿನಪತ್ರಿಕೆ**

**ಮಹಾಶಿವರಾತ್ರಿ ನಿಮಿತ್ತ ವಿಶೇಷ ಲೇಖನ**

ಬ್ರಹ್ಮ ಮತ್ತು ವಿಷ್ಣುವಿನ ನಡುವೆ ಶ್ರೇಷ್ಠತೆಯ ಭಾವ ತಾ ಹೆಚ್ಚು ನಾ ಹೆಚ್ಚೆಂಬ ವಾದ ತಾರಕಕ್ಕೇರಿ ಇನ್ನೇನು ರಣರಂಗಕ್ಕೆ ಕಾರಣವಾಗುವ ಹೊತ್ತಿಗೆ ಇವರಿಬ್ಬರ ಮಧ್ಯೆ ಶಿವನು ಮಧ್ಯ ಪ್ರವೇಶಿಸಿ ಇಬ್ಬರಿಗೂ ತಿಳುವಳಿಕೆ ನೀಡಿ ಕೊನೆಗೆ ಸಂಧಾನ ಮಾಡಿಸಿ, ಕೈಲಾಸ ಪರ್ವತಕ್ಕೆ ಬಂದು ವಿರಾಜಮಾನನಾಗುತ್ತಾನೆ. ಆ ಸಂದರ್ಭದಲ್ಲಿ ಶ್ರೀ ವಿಷ್ಣು ಬ್ರಹ್ಮರು ಶಿವನ ಎಡ ಬಲದಲ್ಲಿ ಕುಳಿತು ಹಾರು, ತುರಾಯಿ, ಶಿವನಾಮದೊಂದಿಗೆ ಮುಂತಾದ ದಿವ್ಯ ವಸ್ತುಗಳಿಂದ ಮತ್ತು ಉಪಹಾರಗಳಿಂದ ಅನನ್ಯ ಭಕ್ತಿಯಿಂದ ಶಿವಪೂಜೆಯನ್ನು ಮಾಡಿದರು. ಇವ-ರಿಬ್ಬರ ಭಕ್ತಿ ನಿಷ್ಠೆಗೆ ಸಂತುಷ್ಟನಾದ ಶಿವನು ವಿಷ್ಣು ಬ್ರಹ್ಮರನ್ನು ಕುರಿತು " ಎಲೈ ವತ್ಸರೇ, ಇಂದಿನ ದಿವಸವು ಮಹತ್ತರವಾದುದು, ಈ ದಿನವು ಶಿವರಾತ್ರಿ ಎಂಬ ಹೆಸರಿನಿಂದ ಪ್ರಸಿದ್ಧವಾಗಿ ಪವಿತ್ರ ದಿನವೆನಿಸುವುದು. ಈ ತಿಥಿ ನನಗೆ ಅತ್ಯಂತ ಪ್ರಿಯ ತಿಥಿಯಾಗಿರುವುದು" ಎಂದು ಶಿವನು ನುಡಿದನು. ವಿಷ್ಣು ಬ್ರಹ್ಮರಿಗೆ ಶಿವ ಬೋಧೆ ನೀಡಿದ ಪವಿತ್ರ ದಿನವೇ ಶಿವರಾತ್ರಿ ಎಂದು ಶಿವ ಪುರಾಣದಿಂದ ತಿಳಿದು ಬರುತ್ತದೆ.

ಮಾಘ ಮಾಸದ ಚತುರ್ದಶಿಯಂದು ಶಿವರಾತ್ರಿ ಆಚರಣೆ ಜಗತ್ತಿನ ಎಲ್ಲ ಶಿವ ಭಕ್ತರಿಂದ ವಿಜೃಂಭಣೆಯಿಂದ ಜರುಗುತ್ತದೆ. ಇನ್ನೂ ಹಲವು ಪುರಾಣಗಳ ಪ್ರಕಾರ ಪಾರ್ವತಿದೇವಿ(ಉಮೆ) ಶಿವನನ್ನು ವಿವಾಹವಾದ ದಿನವಿದು. ಶಿವ ರುದ್ರತಾಂಡವ ನೃತ್ಯವಾಡಿದ ದಿನ. ದೇವತೆಗಳು ಮತ್ತು ಅಸುರರ ನಡುವೆ ಸಮುದ್ರ ಮಂಥನ ನಡೆದು, ವಿಷವನ್ನೆಲ್ಲ ಕುಡಿದು ನೀಲಕಂಠನಾದಾಗ ಗಂಟಲಿನಲ್ಲಿನ ವಿಷ ದೇಹದೊಳಗೆ ಇಳಿಯದಂತೆ ಪಾರ್ವತಿದೇವಿ ರಾತ್ರಿಯಿಡೀ ತಡೆದ ದಿನ. ತನ್ನ ಪೂರ್ವಜರ ಆತ್ಮಕ್ಕೆ ಶಾಂತಿ ಕೋರಿ ಚಿತಾಭಸ್ಮಕ್ಕೆ ಗಂಗೆಯನ್ನು ಹ-ರಿಸುವಂತೆ ಭಗೀರಥ ನಡೆಸಿದ ಘೋರ ತಪಸ್ಸಿಗೆ ಮೆಚ್ಚಿದ ಶಿವನು ತನ್ನ ಜಡೆಯಲ್ಲಿ ಅಲಂಕರಿಸಿದ್ದ ಗಂಗೆಯನ್ನು ಭೂಮಿಗೆ ಹರಿಸಿದ ದಿನವೆಂದು ಪುರಾಣಗಳು ತಿಳಿಸುತ್ತವೆ.

ಈ ಪುಣ್ಯ ದಿನದಂದು ಶಿವನ ಮೂರ್ತರೂಪಕ್ಕಾಗಲಿ, ಲಿಂಗರೂಪಿಗಾಗಲಿ ಯಾರು ಶ್ರದ್ಧೆ-ಭಕ್ತಿಯಿಂದ ಪೂಜಿಸುವರೋ



– ಡಾ. ಸಂತೋಷ ಬಿ. ನವಲಗುಂದ, ಪತ್ರಕರ್ತರು, ಬರಹಗಾರರು, ಮಳ್ಳಿ

ಅವರು ಶ್ರೇಷ್ಠರೆನಿಸಿಕೊಳ್ಳುವರು. ಇಲ್ಲಿ ವಿಶೇಷವಾಗಿ ಶಿವರಾತ್ರಿಯನ್ನು ರಾತ್ರಿಯಿಡೀ (ಜಾಗರಣೆ) ಭಜನೆ, ಸತ್ಸಂಗ, ಪುರಾಣ-ಪ್ರವಚನ ಇತ್ಯಾದಿ ಪೂಜಾಕರ್ಯಗಳ ಮೂಲಕ ಶಿವನ ಆರಾಧನೆ ಜರುಗುತ್ತದೆ. ದಿನವಿಡೀ ಉಪವಾಸ ವ್ರತದಿಂದ ಶಿವನನ್ನು ಪೂಜಿಸಿವುದು ವಿಶೇಷವಾಗಿರುತ್ತದೆ. ಷಡಕ್ಷರಿದೇವ ರಚಿಸಿದ ರಾಜಶೇಖರ ವಿಳಾಸ ಕೃತಿಯ ಮೂರನೇ ಆಶ್ವಾಸದಲ್ಲಿ ಪಂಚವಿಂಶತಿ ಲೀಲೆಗಳು ಎಂಬ ಶಿವನ ಇಪ್ಪತ್ತೈದು ಲೀಲೆಗಳನ್ನು ವಿವರಿಸಿದ್ದಾನೆ. ಶಿವನ ಈ ಎಲ್ಲ ಲೀಲೆಗಳನ್ನು ಓದಿ ಅರ್ಥೈಸಿಕೊಂಡಾಗ ಶಂಕರನ ವಿರಾಡ್ರೂಪ ಕಣ್ಣ ಮುಂದೆ ಕಟ್ಟುತ್ತದೆ. ಭಕ್ತಿಯ ಭಾವವೂ ಇಮ್ಮಡಿಗೊಳ್ಳುತ್ತದೆ. ಈ ಮೂಲಕ ಶಿವನ ವಿವಿಧ ರೂಪ, ಅವತಾರಗಳು ಗೋಚರವಾಗುತ್ತವೆ. ಅಂತೆಯೇ, ಶಿವನಾಮದಿಂದಲೇ ಜೀವನ್ಮುಕ್ತಿ ಎನ್ನುವುದು ಭಾರತೀಯರ ಬಲವಾದ ನಂಬಿಕೆಯಾಗಿದೆ.

ಭಸ್ಮ, ರುದ್ರಾಕ್ಷಿ ಮತ್ತು ಶಿವನಾಮ ಈ ಮೂರು ಪುಣ್ಯರೂಪ ತರಿವೇಣಿಗೆ ಸಮನಾದ ಫಲದಾಯಕವಾಗಿರುವುದು. ಯಾರು ನಿತ್ಯವೂ ಭಸ್ಮ, ರುದ್ರಾಕ್ಷಿ ಧರಿಸಿ ಪಂಚಾಕ್ಷರಿ ಮಂತ್ರವನ್ನು ನಿರ್ಮಲ ಭಾವದಿಂದ ಜಪಿಸುವರೋ ಅಂತಹ ಭಕ್ತರು ಶಿವನಿಗೆ ಪ್ರಿಯರಾಗುತ್ತಾರೆ. ಯಾರು ಇವೆಲ್ಲವನ್ನೂ ತಿರಸ್ಕಾರಿಸುತ್ತಾರೋ ಅವ-ರಿಗೆ ದಾರದ್ರ□□ವೇ ಗತಿ ಎಂಬುದು ಶಿವಪುರಾಣ ಸ್ಪಷ್ಟಪಡಿಸುತ್ತದೆ.

ಹಿಂದೂಗಳು ಶ್ರದ್ಧೆಯಿಂದ ಪೂಜಿಸುವ ದೇವರುಗಳಲ್ಲಿಯೇ ಅತ್ಯಂತ ನಿರಾಡಂಬರದ ಪೂಜೆ ಬಯಸುವವನು ಶಿವನೆಂಬುದು ಭಕ್ತರ ನಂಬಿಕೆ. ಅಂತೆಯೇ ಶಿವನು ಭಸ್ಮ, ರುದ್ರಾಕ್ಷಿ, ಬಿಲ್ವಪತ್ರೆಯ ಪರಮ ಆಸಕ್ತ. ವಿಶ್ವದ ನಾನಾ ಭಾಗಗಳಲ್ಲಿರುವ ಶಿವನ (ಲಿಂಗರೂಪಿ) ದೇವಾಲಯಗಳಲ್ಲಿ ಶಿವರಾತ್ರಿಯಂದು ವಿಶೇಷ ಅಲಂಕಾರದಿಂದ ಪೂಜಾ ಕರ್ಕ್ರಮಗಳು ನಡೆಯುವವು. ವರ್ಷದಲ್ಲಿ ಬರುವ ಈ ಪವಿತ್ರ ದಿನದಂದು ಭಕ್ತರು ತಮ್ಮ ಭಕ್ತಿಯನ್ನು ಮೆರೆಯುವುದನ್ನು ಕಾಣುತ್ತೇವೆ.

ಮಾನವ ಮಹಾಮಾನವನಾಗಲು ಮಹಾಶಿವರಾತ್ರಿ ಆರಾಧನೆ: ಮನುಷ್ಯ ಮನುಷ್ಯನಾಗಿ ಬದುಕುವ ಹಾಗೂ ಸಕಲ ಜೀವಪರ ಬಾಳು ನಮ್ಮದಾಗಿಸಿ ಆತ್ಮದರಿವಿನಿಂದ ಪರಮಾತ್ಮನನ್ನು ಸಂತುಷ್ಟಗೊಳಿಸುವ ಪರಮ ಧ್ಯೇಯವೇ ಮಹಾಶಿವರಾತ್ರಿಯ ಆಚರಣೆ.

ರಂಗವಂದೇ ಕಂಬ ಒಂದೇ<br>
ದೇವರೊಂದೆ ದೇಗುಲ ಒಂದೆ<br>
ಗುಹೇಶ್ವರಾ! ನಿಮ್ಮ ಮನ್ನಣೆಯ<br>
ಶರಣರೇ ದೇವರೆಂಬೆ.


ಲಿಂಗದಲ್ಲಿ ಮನವಿರಿಸಿದ ಶರಣಂಗೆ ದೇವರೊಬ್ಬನೇ. ಅಂತರಂಗವೇ ಮಂಟಪವಾಗಿ ಅಲ್ಲಿನ ಕಂಬವೇ ಏಕೋಭಾವವಾಗಿ ಮಂಟಪದಲ್ಲಿನ



ಪರವಸ್ತುವೇ ದೈವವಾಗಿ ಕಂಡು ನಡೆದ ಶರಣರೇ ದೇವರೆಂಬ ಹಿರಿದಾದ ಅರ್ಥ ಪ್ರಭುದೇವರ ವಚನದಲ್ಲಡಗಿದೆ. ಈ ಕಟು ವಾಸ್ತವವನ್ನು ಅರಿತು ಮಾಡಿದ ಆಚರಣೆ ನಿಜಕ್ಕೂ ಶಿವನಿಗರ್ಪಿತವಾಗುವುದು. ಲಿಂಗ ಬೇರೆಯಲ್ಲ; ಶಿವ ಬೇರೆ ಅಲ್ಲ. ಮನುಷ್ಯ ತನ್ನ ನಿತ್ಯ ಬದುಕಿನ ಏರಿಳಿತಗಳಲ್ಲಿ ಜಿಗುಪ್ಸೆ, ಜಿದ್ದು, ಕೋಪ, ಭಾವೋದ್ವೇಗ, ಹತಾಶೆ, ಸಂಕುಚಿತತೆ, ಭಾವ ಕಲ್ಮಷ, ಅಲ್ಲದ ಪ್ರಚೋದನೆಗೊಳಗಾಗಿ ದಾನವರಂತೆ ವರ್ತಿಸದೇ ಸ್ಥಿತಪ್ರಜ್ಞ ಮಾನವನಾಗಿ ನಡೆದು ದೇವನೊಲುಮೆಗೆ ಪಾತ್ರನಾಗುವುದು ಅಷ್ಟೇ ಅಗತ್ಯವಾಗಿದೆ.

ಹಣೆಯಲ್ಲಿ ಧರಿಸಿದ ವಿಭೂತಿ ಸಜ್ಜನಿಕೆ, ಸೌಜನ್ಯ, ವಿನಯತೆ ಹಾಗೂ ವಿಧೇಯತೆ ತೋರಿಸುತ್ತದೆ. ಲಿಂಗಾರ್ಚನೆಯಿಂದ ವಿಕಾರಗಳು ಮನದಲ್ಲಿ ಸುಳಿಯದಂತಾಗುತ್ತದೆ. ಅನುಭಾವ ನಡೆ ನುಡಿಯನ್ನು ಶುದ್ಧೀಕರಿಸಿ ಏಕೋಮಂತ್ರದ ಭಾವ ಮೂಡಿಸುತ್ತದೆ. ಅರ್ಪಿಸುವ ಬಿಲ್ವಪತ್ರೆಯಿಂದ ಮನಸ್ಸು ಶಾಂತವಾಗುತ್ತದೆ. ಪಂಚಾಕ್ಷರಿ ಮಂತ್ರ ನುಡಿಯಲು ದೇಹ ಮತ್ತು ಮನಸ್ಸು ಒಂದೇ ಆಗಿ ಲಿಂಗವೇ ಎದ್ದು ಅಪ್ಪಿಕೊಳ್ಳುವಂತಾಗುತ್ತದೆ. ಇಂತಹ ಅರ್ಚನ, ಅನುಭಾವ, ಅರ್ಪಣ ನಿಜಕ್ಕೂ ಶಿವನಿಗರ್ಪಿತ ಎಂಬುದು ವೇದ್ಯವಾಗುವುದು. ಭಾವ ಕಲ್ಯಾಣವಾಗಿ, ಅತ್ಮ ಲಿಂಗವಾಗಿ, ದೇಹ ದೇವಾಲಯವಾಗುತ್ತದೆ.

ಆಧುನಿಕತೆಯ ಈ ಕಾಲಘಟ್ಟದಲ್ಲಿ ಉಪವಾಸ, ಭಕ್ತಿ, ಹಬ್ಬ-ವ್ರತಾಚ-ರಿಸುವವರ ಕೊರತೆಯೇನಿಲ್ಲ. ಆದರೆ, ಇದು ಹಿರಿಯರಿಗೆ ಮಾತ್ರ ಸೀಮಿತವಾಗಿದೆ ಎನ್ನುವುದು ಅಷ್ಟೇ ಸತ್ಯವೆನಿಸುತ್ತದೆ. ರಾತ್ರಿಪೂರ್ತಿ ಇಂಗ್ಲೀಷ ಕ್ಯಾಲೆಂಡರ್ ಮೊದಲ ದಿನದಂದು ಹುಚ್ಚೆದ್ದು ಕುಣಿಯುವ ಯುವಕ-ಯುವತಿಯರು ಈ ನಿಜ ರಾತ್ರಿಗೆ ಶಿವನ ಧ್ಯಾನದಲಿ ಕುಣಿಯಬೇಕಾಗಿದೆ. ನಲಿಯಬೇಕಾಗಿದೆ. ಮಾನವ ಶಿವಸ್ಮರಣೆಯಲಿ ತೊಡಗಿಸಬೇಕಾಗಿದೆ. ಮನೆಯ ಹಿರಿಯರು ಈ ಸನಾತನ ಪ್ರಾಕಲ್ಪನೆಗಳನ್ನು ಕಿರಿಯ-ರಿಗೆ ಬೋಧಿಸಬೇಕಾಗಿದೆ. ಆಚರಣಗೆ ತರಬೇಕಾಗಿದೆ. ಈ ದಿಶೆಯಲ್ಲಿ ಆಚರಣೆ ನಡೆದದ್ದಾದರೆ ನಿಜಕ್ಕೂ ಶಿವರಾತ್ರಿಗೆ ಅರ್ಥ ಬಂದೀತು.



ಅಷ್ಟವಿಧಾರ್ಚನೆ ಷೋಡಶೋಪಚಾರವ<br>
ಮಾಡುವುದು, ಮಾಡಿದ ಪೂಜೆಯ<br>
ನೋಡುವುದಯ್ಯ, ಶಿವತತ್ವ ಗೀತವ ಪಾಡುವುದು<br>
ಶಿವನ ಮುಂದೆ ನಲಿದಾಡುವುದಯ್ಯ<br>
ಭಕ್ತಿ ಸಂಭಾಷಣೆ ಮಾಡುವುದು<br>
ನಮ್ಮ ಕೂಡಲಸಂಗನ ಕೂಡುವುದಯ್ಯ.

ನಲಿದಾಡುವುದು ಶಿವನ ಮುಂದಾಗಬೇಕು. ಭಕ್ತಿಯ ಸಂಭಾಷಣೆ ಮಾಡುವುದೆಂದರೆ ಕೂಡಲಸಂಗನನ್ನೇ (ಶಿವನನ್ನೇ) ಕೂಡಿಕೊಂಡಿರಬೇಕೆಂಬ ಭಾವ ಬಸವಣ್ಣನವರದ್ದಾಗಿದೆ.

ಶಿವ ಶಿವಾ, ಶಿವ ಶಿವಾ, ಶಿವ ಶಿವಾ<br>
ಎಂದೊಮ್ಮೆ<br>
ಶಿವನಾಗಿ ಶಿವನ ಪೂಜಿಸು ಮನವೆ<br>
ಹರ ಹರಾ, ಹರ ಹರಾ, ಹರ ಹರಾ<br>
ಎಂದೊಮ್ಮೆ<br>
ಹರನಾಗಿ ಪುರಹರನ ಪೂಜಿಸು ಮನವೆ<br>
ಲಿಂಗವೇ, ಲಿಂಗವೇ ಲಿಂಗವೇ<br>
ಎಂದೊಮ್ಮೆ<br>
ಕಪಿಲಸಿದ್ಧ ಮಲ್ಲಿಕಾರ್ಜುನಲಿಂಗವ ಪೂಜಿಸಿ<br>
ಲಿಂಗವಾಗು ಮನವೆ.

ಶಿವನ ಪೂಜಿಸಿದರೆ ಶಿವನಂತಾಗಬೇಕು. ಹರನ ಪೂಜಿಸಿದರೆ ಹರನಂತಾಗಬೇಕು. ಲಿಂಗವ ಪೂಜಿಸಿದರೆ ಲಿಂಗವೇ ತಾನಾಗಿರಬೇಕು. ಇಂತಹ ದಿವ್ಯ ತನ್ಮಯತೆಯಿಂದ ಶಿವ(ಲಿಂಗ)ನ ಪೂಜಿಸಿದೊಡೆ ಅದೇ ಶಿವಯೋಗ ಎನಿಸುತ್ತದೆ. ಇದೇ ಮಹಾಶಿವರಾತ್ರಿಯೂ ಎನಿಸುತ್ತದೆ. ಪುಣ್ಯದ ಫಲವೂ ಸಿದ್ಧಿಸುತ್ತದೆ.

ಶ್ರೇಷ್ಠ-ಕನಿಷ್ಠ ಬೇಧಗಳಳಿಸಿ, ನಿರ್ಮಲ ಭಾವದಿ ಆತ್ಮ ಲಿಂಗದೊಳಿರುವ ಪರಮಾತ್ಮನ ಚೇತನವನ್ನು ಪೂಜಿಸಿ, ಮಾನವರೆಲ್ಲ ಮಹಾಮಾನವರೆನಿಸಿಕೊಳ್ಳುವ ಪಥವೇ ಮಹಾಶಿವರಾತ್ರಿ ಶಿವಯೋಗವಿದು.

# ಸಾಲೋಟಗಿಯಲ್ಲಿ ಉತ್ಖನನ ಅವಶ್ಯಕತೆಯಿದೆ :ಕೋರಿ

**ಉದಯರಶ್ಮಿ ನ್ಯೂಸ್**

ಇಂಡಿ: ರಾಷ್ಟ್ರಕೂಟರ ಕಾಲದಲ್ಲಿ ಸಾಲೋಟಗಿಯಲ್ಲಿ ಅಸ್ತಿತ್ವದಲ್ಲಿದ್ದ ಅಗ್ರಹಾರ. ಆಗಿನ ಕಾಲದಲ್ಲಿ ಜ್ಞಾನದ ಕೇಂದ್ರವಾಗಿ ನಾಡಿಗೆ ಗುರುವಾಗಿತ್ತು ಎಂದು ಶಿಕ್ಷಕ, ಸಾಹಿತಿ ದಶರಥ ಕೋರಿ ಉಪನ್ಯಾಸದ ಮೂಲಕ ಮಕ್ಕಳಿಗೆ ಮಾಹಿತಿ ನೀಡಿದರು.

ತಾಲೂಕಿನ ಸಾಲೋಟಗಿ ಗ್ರಾಮದ ಎಸ್ ವಾಯ್ ಪದವಿ ಪೂರ್ವ ಕಾಲೇಜು (ಪ್ರೌಢವಿಭಾಗದ) 2023–24 ಎಸ್ ಎಸ್ ಎಲ್ ಸಿ ಮಕ್ಕಳ ಬೀಳ್ಕೊಡುವ ಸಮಾರಂಭದಲ್ಲಿ ಮಾತನಾಡುತ್ತ ಅವರು, ಸಾಲೋಟಗಿ ಐತಿಹಾಸಿಕವಾಗಿ, ಧಾರ್ಮಿಕವಾಗಿ, ಜಾನಪದವಾಗಿ ನಾಡಿನಲ್ಲಿ ಅತ್ಯಂತ ಶ್ರೇಷ್ಠವಾದ ಸಾಧನೆಯ ಮೈಲುಗಲ್ಲನ್ನು ಸ್ಥಾಪಿಸಿದೆ. ಸಾಲೋಟಗಿಯಲ್ಲಿನ ಅಗ್ರಹಾರದ ಕುರಿತು ಮತ್ತು ಕಾಲಜ್ಞಾನಿ ಶಿವಯೋಗಿಶ್ವರರು ಬರೆದಿರುವೆನ್ನಲಾದ ಡಂಗರು ಪದಗಳ ಕುರಿತು ಇನ್ನಷ್ಟು ಬೆಳಕು ಚೆಲ್ಲಬೇಕು.



ಅದರ ಜೊತೆಗೆ ನಾಡಿಗೆ ಜ್ಞಾನ ಕೇಂದ್ರವಾಗಿ,ಗುರುವಾಗಿದ್ದ ಇಲ್ಲಿನ ಅಗ್ರಹಾರ ಮತ್ತು ಹಲವು ದೇವಸ್ಥಾನದ ಪೂರಕ ಮಾಹಿತಿ ತಿಳಿಯಲು ಉತ್ಖನನದ ಅವಶ್ಯಕತೆಯಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಪ್ರೌಢಶಾಲಾ ಮುಖ್ಯಗುರುಗಳಾದ ಎಸ್ ವಾಯ್ ಉಪಾಸೆಯವರು ಮಾತನಾಡುತ್ತ ಮಕ್ಕಳಲ್ಲಿ ಸಂಶೋಧನಾ ಪ್ರವೃತ್ತಿ ಹೆಚ್ಚು ಮಾಡಿಕೊಳ್ಳಬೇಕೆಂದು ಕರೆ ನೀಡಿದರು.

ಶಾಲಾ ಬೀಳ್ಕೊಡುವ ಸಮಾರಂಭದಲ್ಲಿ ರಾಜ್ಯ ಮಟ್ಟದಲ್ಲಿ ಕ್ರೀಡಾ ಸಾಧನೆ ಮಾಡಿದ ಶಾಲಾ ವಿದ್ಯಾರ್ಥಿ ವಿದ್ಯಾರ್ಥಿನೀಯರನ್ನು ಮತ್ತು ವಿವಿಧ ವಿಭಾಗಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಎಸ್ ಬಿ ಢಾಣೆ, ಜೆ ಎಮ್ ಕಡಣಿ, ಎಸ್ ಆರ್ ರಾಠೋಡ, ಎನ್ ಆರ್ ಬಗಲಿ, ಎಲ್ ಎಸ್ ಖ್ವಾಯಗೋಳ, ಶ್ರೀಮತಿ ಬಿ ಕೆ ಪಾಟೀಲ,ಕುಮಾರಿ ಎ ಪಿ ಮಠಪತಿ, ಎಸ್ ವಿ ಗಾಣಗೇರ, ಶ್ರೀ ಎಸ್ ಆರ್ ಈಶ್ವರಗೊಂಡ ಉಪಸ್ಥಿತರಿದ್ದರು.

# ಡಾ.ನಾಯಿಕ ಗೆ ಬಿಜೆಪಿ ಟಿಕೆಟ್ ನೀಡಲು ಆಗ್ರಹ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಭಾರತೀಯ ವೈದ್ಯಕೀಯ ಪ್ರಕೋಷ್ಟಕರಾಗಿ ಕಾರ್ಯನಿರ್ವಹಿಸುತ್ತಿರುವ ಡಾ. ಬಾಬು ರಾಜೇಂದ್ರ ನಾಯಿಕರವರಿಗೆ ಈ ಬಾರಿ ವಿಜಯಪುರ ಮತಕ್ಷೇತ್ರದಿಂದ ಲೋಕಸಭೆಗೆ ಸ್ಪರ್ಧಿಸಲು ಅವಕಾಶ ನೀಡಬೇಕು ಎಂದು ದೇವರಹಿಪ್ಪರಗಿ ಮತಕ್ಷೇತ್ರದ ಬೆಂಬಲಿಗರು ಹಾಗೂ ಅಭಿಮಾನಿಗಳ ಸಂಘದ ಅಧ್ಯಕ್ಷ ಬಾಳು ರಾಠೋಡ ಆಗ್ರಹಿಸಿದ್ದಾರೆ.

ಪಟ್ಟಣದ ಪ್ರವಾಸಿಮಂದಿರದಲ್ಲಿ ಗುರುವಾರ ಈ ಕುರಿತು ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಪಾಲ್ಗೊಂಡು ಮಾತನಾಡುತ್ತಾ, ಡಾ.ಬಾಬುರಾಜೇಂದ್ರ ನಾಯಿಕರು ಕಳೆದ 15 ವರ್ಷಗಳಿಂದ ಸಂಘ ಪರಿವಾರದ ಕಟ್ಟಾಳುಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಜೊತೆಗೆ



ಕಳೆದ 8 ವರ್ಷಗಳಿಂದ ಬಿಜೆಪಿ ಸಕ್ರೀಯ ಕಾರ್ಯಕರ್ತರಾಗಿ ಗುರುತಿಸಿಕೊಂಡಿದ್ದಾರೆ. ಅಲ್ಲದೇ ಕೊರೋನಾ ಕಾಲದ ಲಾಕ್‌ಡೌನ್ ಸಮಯದಲ್ಲಿ ರೋಗಿಗಳ ಆರೈಕೆ ಮಾಡುವುದರ ಜೊತೆಗೆ ಅನೇಕ ಜನಪರ, ಸಾಮಾಜಿಕ ಸೇವಾಕಾರ್ಯಗಳನ್ನು ಕೈಗೊಂಡು ಮಾನವೀಯತೆ ಮೆರೆದಿದ್ದಾರೆ. ಅಲ್ಲದೇ ಪ್ರಧಾನಿ ಮೋದಿಯರವರ ಆಶಯದಂತೆ ಸ್ವಚ್ಛತಾ ಆಂದೋಲನದ ಕಾರ್ಯಗಳಲ್ಲಿ ಪಾಲ್ಗೊಂಡು ಗಮನಸೆಳೆದಿದ್ದಾರೆ.

ಬೀಳಗಿ ಪಟ್ಟಣದಲ್ಲಿ ಗೋಶಾಲೆ ತೆರೆಯುವುದರ ಮೂಲಕ ಗೋರಕ್ಷಣೆ ಕಾರ್ಯ ಆರಂಭಿಸಿರುವ ಡಾ.ಬಾಬುರಾಜೇಂದ್ರ ನಾಯಿಕರು ತಮ್ಮ ಹಲವಾರು ನಿಸ್ವಾರ್ಥ ಸೇವೆಗಳ ಮೂಲಕ ಜಿಲ್ಲೆಯ ಜನಪ್ರೀಯ ವ್ಯಕ್ತಿಯಾಗಿ, ಎಲ್ಲ ಸಮುದಾಯಗಳೊಂದಿಗೆ ಅನೂನ್ಯತೆ ಭಾವ ಹೊಂದಿದ್ದಾರೆ. ಯುವಕರಿಗೆ ಮಾನವೀಯತೆ, ಕಳಕಳಿಯ ಸ್ನೇಹಿತನಾಗಿ, ಜಿಲ್ಲೆಯ ಬಹುತೇಕ ಎಲ್ಲ ಮಠಮಾನ್ಯಗಳ ಸ್ವಾಮೀಜಿಗಳ ಪರಮಭಕ್ತರಾಗಿ ಹಾಗೂ ಎಲ್ಲ ಹಿರಿಯ, ಕಿರಿಯ ರಾಜಕೀಯ ನಾಯಕರೊಂದಿಗೆ ಆತ್ಮೀಯತೆ ಭಾವ ಹೊಂದಿದ್ದಾರೆ. ಇಂಥ ನಾಯಕರ ಅಗತ್ಯತೆ ಇಂದು ಜಿಲ್ಲೆಗೆ ಅಗತ್ಯವಾಗಿದೆ. ಆದ್ದರಿಂದ ಬಿಜೆಪಿ ರಾಷ್ಟ್ರೀಯ ಹಾಗೂ ರಾಜ್ಯ ನಾಯಕರು ಇವರ ಸೇವೆಗೆ ಅವಕಾಶ ಕಲ್ಪಿಸಲು ಈ ಬಾರಿ ನಮ್ಮ ಜಿಲ್ಲೆಯಿಂದ ಲೋಕಸಭೆ ಸ್ಪರ್ಧೆ ಮಾಡಲು ಇವರಿಗೆ ಟಿಕೆಟ್ ನೀಡಬೇಕೆಂದು ಒತ್ತಾಯಿಸಿದರು.

ಬಿಜೆಪಿ ಧುರೀಣ ವಿನೋದ ಚವ್ಹಾಣ, ಮೋಹನ ಚವ್ಹಾಣ, ರಾಕೇಶ ರಜಪೂತ, ಶ್ರೀಕಾಂತ ಕಾಖಂಡಕಿ, ಜಗದೀಶ ಚವ್ಹಾಣ, ಅನೀಲ ರಾಠೋಡ, ಭೀಮು ಚವ್ಹಾಣ, ರವಿ ರಾಠೋಡ ಸೇರಿದಂತೆ ಇತರರು ಇದ್ದರು.

# ಪಿಯುಸಿ ಪರೀಕ್ಷಾ ಕೇಂದ್ರಗಳಿಗೆ ಜಿಪಂ ಸಿಇಓ ರಿಷಿ ಭೇಟಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ದ್ವಿತೀಯ ಪಿಯುಸಿ ಪರೀಕ್ಷೆ ನಡೆಯುತ್ತಿರುವ ವಿಜಯಪುರ ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ದರ್ಬಾರ್ ಪದವಿ ಪೂರ್ವ ಕಾಲೇಜಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ರವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಗುರುವಾರ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿದ ಅವರು, ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳ ಹಾಜರಾತಿ ಕುರಿತು ಕಾಲೇಜಿನ ಪ್ರಾಚಾರ್ಯರೊಂದಿಗೆ ಚರ್ಚಿಸಿದರು. ವಿ ಬಿ ದರ್ಬಾರ್ ಕಾಲೇಜಿಗೆ ಭೇಟಿ ನೀಡಿ ಪರೀಕ್ಷಾ ಕೊಠಡಿಗಳನ್ನು



ವೀಕ್ಷಣೆ ಮಾಡಿದರು

ಈ ಸಂದರ್ಭದಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಬಸವರಾಜ, ದರ್ಬಾರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ತಿರುಮಲ ಕುಲಕರ್ಣಿ ಮತ್ತು ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಮಠಗಳಿಂದ ಉತ್ತಮ ಸಂಸ್ಕಾರ ಸಾಧ್ಯ :ಡಾ.ವೀರಸೋಮೇಶ್ವರ ಶ್ರೀ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಇಂದಿನ ಮಕ್ಕಳಿಗೆ ಸಾಕಷ್ಟು ವಿದ್ಯಾರ್ಜನೆ ಕೊಡಿಸುವದರ ಜೊತೆಗೆ ಕೆಲವಿಷ್ಟಾದರೂ ನಮ್ಮ ಧರ್ಮದ, ಇತಿಹಾಸದ, ಆದರ್ಶ ಪರಂಪರೆಯ ಪರಿಚಯವನ್ನ ಮಾಡಿಸಿ ಇಲ್ಲದಿದ್ದರೆ ಮುಂದೊಂದು ದಿನ ಅನೇಕ ಆತಂಕಗಳನ್ನು, ಸಂಕಷ್ಟಗಳನ್ನು ಎದುರಿಸುವ ಪರಿಸ್ಥಿತಿ ಬರಬಹುದು ಎಂದು ಬಾಳೆಹೊನ್ನೂರಿನ ರಂಭಾಪುರಿ ಪೀಠದ ಜಗದ್ಗುರು ಡಾ.ವೀರಸೋಮೇಶ್ವರ ಭಗವದ್ಪಾದಕರು ಹೇಳಿದರು.

ತಾಲೂಕಿನ ಕುಂಟೋಜಿ ಸಂಸ್ಥಾನ ಹಿರೇಮಠದ ಡಾ.ಚನ್ನವೀರ ದೇವರ ಗುರು ಪಟ್ಟಾಧಿಕಾರ ಮಹೋತ್ಸವದ ಎರಡನೆಯ ದಿನದ ಧರ್ಮ ಜಾಗೃತಿ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಆರೋಗ್ಯಪೂರ್ಣ ಸಮಾಜದ



ನಿರ್ಮಾಣಕ್ಕಾಗಿ ಶಾಸ್ತ್ರದ ಭಯ ಇರಬೇಕು. ಇಲ್ಲವೇ ಶಸ್ತ್ರದ ಭಯವಾದರೂ ಇರಬೇಕು. ಆದರೆ ಇವತ್ತು ಮನುಷ್ಯ ಶಾಸ್ತ್ರದ ಮರ್ಯಾದೆಯನ್ನು ಮೀರಿ ಕವಲುದಾರಿಯಲ್ಲಿ ನಡೆಯುತ್ತಿರುವದರಿಂದ ಅನೇಕ ಸಂಕಷ್ಟಗಳಿಗೆ ಬಲಿಯಾಗುತ್ತಿದ್ದಾನೆ. ಎಷ್ಟೇ ಸಂಪತ್ತು ಗಳಿಸಿದರೂ, ಅಧಿಕಾರದ ಅಂತಸ್ತು ಪಡೆದಿದ್ದರೂ ಆತ್ಮಶಾಂತಿ, ನೆಮ್ಮದಿ ಇಲ್ಲ. ಹಾಗಾಗಿ ಮನುಷ್ಯನಿಗೆ ಶಾಸ್ತ್ರದ ಬಗ್ಗೆ ಒಂದಿಷ್ಟಾದರೂ ಅರಿವು ಇರಬೇಕು. ಇಲ್ಲದೇ ಹೋದರೆ ಶಸ್ತ್ರ ನಮ್ಮನ್ನ ಬಂಧಿಸುತ್ತದೆ ಎಂದರೆ.

ವೀರಶೈವದ ಧರ್ಮದ ಪಂಚಪೀಠಗಳು ಸಮಾಜದಲ್ಲಿ ಜಾತಿ ಮತ ಪಂಥಗಳನ್ನು ಮೀರಿ ಎಲ್ಲ ವರ್ಗದ ಜನರಿಗೆ ಸಮನ್ವಯದ ಶಾಂತಿ ಸಂದೇಶವನ್ನ ಯಾವಾಗಲೂ ಕೊಡುತ್ತ ಬಂದಿವೆ. ಉತ್ತಮ ಸಂಸ್ಕಾರ ಪಡೆಯಲು ಮಠಗಳಿಂದ ಸಾಧ್ಯವೇ ಹೊರತು ಬೇರೆ ಎಲ್ಲೂ ಸಿಗಲ್ಲ ಎಂದರು.

ಸಿಂದಗಿಯ ಪ್ರಭು ಸಾರಂಗ ಶಿವಾಚಾರ್ಯರು, ಎಮ್ಮಿಗನೂರಿನ ವಾಮದೇವ ಮಹಾಂತ ಶಿವಾಚಾರ್ಯರು, ಮಾಜಿ ಸಚಿವ ಎಸ್.ಕೆ.ಬೆಳ್ಳುಬ್ಬಿ, ದಾಸೋಹ ಸೇವೆ ನೀಡಿದ ಸಮಾಜ ಸೇವಕ ಸಿ.ಬಿ.ಅಸ್ಕಿ ಮಾತನಾಡಿದರು.

ನಿಡಗುಂದಿಯ ರುದ್ರಮುನಿ ಶಿವಾಚಾರ್ಯರು, ಚಳಗೇರಿಯ ವಿರುಪಾಕ್ಷಲಿಂಗ ಶಿವಾಚಾರ್ಯರು, ಬಿಲಕೆರಿಯ ಸಿದ್ದಲಿಂಗ ಶಿವಾಚಾರ್ಯರು, ಗುಂಡಕನಾಳದ ಗುರುಲಿಂಗ ಶಿವಾಚಾರ್ಯರು ಸೇರಿದಂತೆ ಹರ ಗುರು ಚರಮೂರ್ತಿಗಳ ಆದಿಯಾಗಿ ವಿವಿಧ ಗಣ್ಯರು ವೇದಿಕೆಯ ಮೇಲಿದ್ದರು. ಉಪನ್ಯಾಸಕ ಯು.ಎನ್.ಕುಂಟೋಜಿ ಉಪನ್ಯಾಸ ನೀಡಿದರು. ಜಿಲ್ಲಾ ಪಂಚಾಯತ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ ಸ್ವಾಗತಿಸಿದರು.

# ಅಂತರಾಷ್ಟೀಯ ಮಹಿಳಾ ದಿನಾಚರಣೆ (ಮಾರ್ಚ್ 8) ಯ ಒಂದು ಝಲಕ್

**ಉದಯರಶ್ಮಿ ದಿನಪತ್ರಿಕೆ**

ಅದೊಂದು ಬೃಹತ್ತಾದ ವೇದಿಕೆ. ದೊಡ್ಡ ಮಠದ ಸ್ವಾಮೀಜಿಗಳು, ಆ ಭಾಗದ ಶಾಸಕರು, ಜಿಲ್ಲಾ ಪಂಚಾಯತ್ ಸದಸ್ಯರು, ಪುರಸಭೆ ಅಧ್ಯಕ್ಷರು ಮತ್ತಿತರ ಘಟಾನುಘಟಿ ರಾಜಕಾರಣಿಗಳು ತಮಗೆ ಮೀಸಲಾಗಿದ್ದ ಕುರ್ಚಿಗಳಲ್ಲಿ ಆಸೀನರಾಗಿದ್ದರು. ಅದು ಸರ್ಕಾರವು ಪ್ರತಿ ವರ್ಷ ನಡೆಸುವ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ನಡೆದ ಕಾರ್ಯಕ್ರಮವಾಗಿತ್ತು.

**ವೀಣಾಂತರಂಗ**



**–ವೀಣಾ ಎಚ್. ಪಾಟೀಲ್, ಮುಂಡರಗಿ**

ಎಂದಿನಂತೆ ಕಾರ್ಯಕ್ರಮ ಪ್ರಾರ್ಥನೆಯೊಂದಿಗೆ ಪ್ರಾರಂಭವಾಯಿತು. ಸ್ವಾಮೀಜಿಯವರ ಅಮೃತ ಹಸ್ತದಿಂದ ಕಾರ್ಯಕ್ರಮದ ಉದ್ಘಾಟನೆಯ ನಂತರ ಉದ್ಘಾಟನಾ ಭಾಷಣವನ್ನು ಮಾಡಿದ ಅವರು ಹೆಣ್ಣು ಮಕ್ಕಳ ವ್ಯಕ್ತಿತ್ವವನ್ನು ಘನತೆಯನ್ನು ನಮ್ಮ ಹಲವಾರು ಪುಣ್ಯ ಸ್ತ್ರೀಯರ ಕುರಿತಾಗಿ ವಿವರಗಳ ಸಮೇತ ಹೇಳಿದರು. ನಂತರ ಮುಖ್ಯ ಅತಿಥಿಗಳ ಭಾಷಣ. ಮಹಿಳಾ ಸಮಾನತೆ ಕುರಿತಾಗಿ ಉಪನ್ಯಾಸ ನೀಡಿದ ಮುಖ್ಯ ಅತಿಥಿಗಳು ಅವರ ಉಪನ್ಯಾಸವನ್ನು ಮುಗಿಸುವ ಹೊತ್ತಿಗೆ ಸುಮಾರು ಒಂದು ಗಂಟೆ ಕಳೆದು ಹೋಗಿತ್ತು. ಅದಾದ ನಂತರ ಆ ಭವ್ಯವೇದಿಕೆಯಲ್ಲಿ ಆ ವರ್ಷದ ಮಹಿಳಾ ಸಾಧಕರಿಗೆ ಸನ್ಮಾನ ಕಾರ್ಯಕ್ರಮ.

ಅಂತೆಯೇ ಆ ವರ್ಷ ಸನ್ಮಾನಿಸಿಕೊಳ್ಳಲಿರುವ ಮಹಿಳೆಯರನ್ನು ವೇದಿಕೆಯ ಮೇಲೆ ಕರೆಯ ತೊಡಗಿದರು. ಅವರ ಕುರಿತಾದ ಸಂಪೂರ್ಣ ಮಾಹಿತಿಯನ್ನು ಜನರಿಗೆ ಒದಗಿಸಿದರು.

ಈ ಬಾರಿ ಮಹಿಳಾ ದಿನಾಚರಣೆಯಂದು ಸನ್ಮಾನಗೊಳ್ಳಲಿರುವ ನನ್ನನ್ನು ವೇದಿಕೆಗೆ ಕರೆದಾಗ ಅತ್ಯಂತ ಪುಳಕದಿಂದ ಹೋಗಿ ಕುರ್ಚಿಯ ಮೇಲೆ ಕುಳಿತುಕೊಂಡೆ. ಶಾಲು ಹೊದೆಸಿ ಹಾರ ಹಾಕಿ ಸ್ಮರಣಿಕೆಯನ್ನು ನೀಡಿ ಸುತ್ತಲು ನಿಂತು ಪುಷ್ಪವೃಷ್ಟಿಗರೆಯುತ್ತಿರಲು ಮಂಗಳವಾದ್ಯಗಳು ಮೊಳಗಿದವು. ಅಷ್ಟರಲ್ಲಿ ಯಾರೋ ನನ್ನ ಕೈ ಹಿಡಿದು ಜಗ್ಗಿದಂತಾಗಲು ಕಣ್ತೆರೆದು ನೋಡಿದರೆ ನಾನಿನ್ನು ಹಾಸಿಗೆಯ ಮೇಲೆ ಮಲಗಿದ್ದೆ. ಒಂದು ಕ್ಷಣ ಅಯೋಮಯವೆನಿಸಿತ್ತು. ನನ್ನ ಮೊಬೈಲ್ ಫೋನಿನ ಕರೆಗಂಟೆ ಮಂಗಳವಾದ್ಯದಂತೆ ಗೋಚರಿಸಿದರೆ ಜಗ್ಗಿದ್ದು ಸಾಕ್ಷಾತ್ ನನ್ನ ಪತಿದೇವರು. ಕೂಡಲೇ ಗಡಬಡಿಸಿ ನನ್ನ ಮೊಬೈಲನ್ನು ಎತ್ತಿ ಕರೆ ಸ್ವೀಕರಿಸಿದರೆ

ಅತ್ತಲಿಂದ ಕೆಲಸದಾಕೆ ತನ್ನ ಮಗನಿಗೆ ಹುಷಾರಿಲ್ಲವೆಂದೂ, ತಾನು ಕೆಲಸಕ್ಕೆ ಬರಲಾಗುವುದಿಲ್ಲ ಎಂದೂ ಬಡ ಬಡನೆ ಹೇಳಿ ಫೋನು ಇಟ್ಟಳು. ಕನಸಿನಲ್ಲಿ ಸನ್ಮಾನ ಸ್ವೀಕರಿಸುತ್ತಿದ್ದ ನಾನು ರಸಭಂಗವಾದಂತಾಗಿ ಎದ್ದು ಕೂತರೆ ಇಲ್ಲಿ ಇನ್ನೊಂದು ಆಭಾಸ. ಆದರೂ ಅನಿವಾರ್ಯವಾಗಿ ಎದ್ದು ಕುಳಿತು ನಿತ್ಯ ವಿಧಿಗಳನ್ನು ಪೂರೈಸಿ ಚಹಾ ಕುಡಿದು ಕೈಯಲ್ಲಿ ಕಸಬರಿಗೆ



ಹಿಡಿದು ಇಡೀ ಮನೆಯ ಕಸವನ್ನು




ಗುಡಿಸಲಾರಂಭಿಸಿದೆ. ಕಸ ಗುಡಿಸಿದ ನಂತರ ಬಕೆಟ್ ನಲ್ಲಿ ನೀರು ತಂದು ಫಿನಾಯಿಲ್ ಹಾಕಿ ಮನೆಯ ಮೂಲೆ ಮೂಲೆಯನ್ನು ಉಜ್ಜಿ ಉಜ್ಜಿ ನೆಲ ವರೆಸುವ ಹೊತ್ತಿಗೆ ಮುಂಜಾನೆಯ ಉಪಹಾರದ ಸಮಯ ಮೀರಿ ಹೋಗಿತ್ತು. ಮೇಲಿನ ತನ್ನ ಕೋಣೆಯಿಂದ ಮಗ ಅಮ್ಮ, ಇವತ್ತಿನ ಟಿಫನ್ ಏನು?? ಎಂಬ ಕೂಗಿಗೆ 'ನೀನೇ ಬಂದು ಹೋಟೆಲಿನಿಂದ ತಂದು ಕೊಡು' ಎಂದು ಹೇಳಲಷ್ಟೇ ಸಾಧ್ಯವಾಗಿದ್ದು.

ಕೂಡಲೆ ಕಾರ್ಯ ಪ್ರವೃತ್ತನಾದ ಮಗ ಸ್ನಾನ ಮಾಡಿ ಕೆಳಗಿಳಿದು ಬಂದು ಹೋಟೆಲಿಗೆ ಹೋಗಿ ತಿಂಡಿ ಕಟ್ಟಿಸಿಕೊಂಡು ಬಂದ. ಬಿಸಿ ಬಿಸಿ ಇಡ್ಲಿ, ವಡ ಹೊಟ್ಟೆಗಿಳಿದಾಗ ಅಬ್ಬಾ!! ಬಹಳಷ್ಟು ಸಮಾಧಾನವಾಯಿತು. ಮತ್ತೆ ಅಡುಗೆ ಮನೆಗೆ ಹೋಗಿ ಹಿಂದಿನ ದಿನದ ಎಲ್ಲ ಪಾತ್ರಗಳನ್ನು ಹೊರಗೆ ತೆಗೆದುಕೊಂಡು ಹೋಗಿ ಎಲ್ಲವನ್ನು ತಿಕ್ಕಿ, ತೊಳೆದು ಸ್ವಸ್ಥಾನ ಸೇರಿಸುವಷ್ಟರಲ್ಲಿ ಸಾಕಾಗಿ ಹೋಯಿತು. ನಂತರ ಬಟ್ಟೆಯ ಸರದಿ. ಮನೆಯ ಎಲ್ಲಾ ಸದಸ್ಯರ ಬಟ್ಟೆಗಳನ್ನು ನೆನೆ ಹಾಕಿ ಒಗೆದು ಹಿಂಡಿ ಹರವಿದ ನಂತರ ಸ್ನಾನ, ಪೂಜೆ ಪೂರೈಸಿ ಅಡುಗೆ ಮನೆಗೆ ಬಂದರೆ ಹೊಟ್ಟೆ ಸಣ್ಣದಾಗಿ ಚುರುಗುಡುತ್ತಿತ್ತು.

ಪಲ್ಯ, ಕಾಳಿಗೆ ಒಗ್ಗರಣೆ ಹಾಕಿ ಅನ್ನ ಸಾರು ಮಾಡಿ ರೊಟ್ಟಿಗೆ ಹೆಂಚು ಇಟ್ಟು ಎಲ್ಲರಿಗೂ ಬಿಸಿ ಬಿಸಿ ರೊಟ್ಟಿ ಬಡಿದು ಕೊಟ್ಟು ಊಟ ಮಾಡಿ ತುಸು ವಿಶ್ರಾಂತಿ ಪಡೆಯಲು ಮಲಗಿದಾಗ ಮಧ್ಯಾಹ್ನದ ಮೂರೂವರೆ.

ಇದು ನಮ್ಮ ಮಹಿಳೆಯರು ತಿಂಗಳಲ್ಲಿ ಮೂರು ನಾಲ್ಕು ಬಾರಿ ಅನುಭವಿಸುವ ಮಹಿಳಾ ದಿನಾಚರಣೆಯ ಒಂದು ಝಲಕು.

ಈ ವರ್ಷ ನನ್ನ ಮಹಿಳಾ ದಿನಾಚರಣೆ ಹೀಗೆ ಪ್ರಾರಂಭವಾಗಿ ಕೊನೆಯಾಯಿತು.... ಖೇದವೇನಿಲ್ಲ ಆದರೆ ಅಭ್ಯಾಸ ಆಗಿ ಹೋಗಿದೆ. ನಿಮ್ಮ ಮಹಿಳಾ ದಿನಾಚರಣೆ ಹೇಗಿತ್ತು ತಿಳಿಸಿ ಸ್ನೇಹಿತರೆ!?



# ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ತಾತ್ಕಾಲಿಕ ಪಟ್ಟಿ ಪ್ರಕಟ :ಆಕ್ಷೇಪಣೆ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯ ಇಂಡಿ ತಾಲೂಕಿನ ನಿಂಬಾಳ ಕೆ.ಡಿ., ಕಪನಿಂಬರಗಿ, ಹಿಂಗಣಿ ಹಾಗೂ ಪಡನೂರ ಗ್ರಾಮ ಪಂಚಾಯತ್‌ಗಳಲ್ಲಿ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸಲು ಆಯ್ಕೆಯಾದ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಪ್ರಕಟಿತ ಪಟ್ಟಿಗೆ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ಆಯ್ಕೆಯಾದ ತಾತ್ಕಾಲಿಕ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಚೇರಿ ನೋಟಿಸ್ ಬೋರ್ಡಿಗೆ ಹಾಗೂ ತಾಲೂಕಾ ಪಂಚಾಯತ್ ಇಂಡಿ, ಕಚೇರಿ ಮತ್ತು ನಿಂಬಾಳ ಕೆ.ಡಿ., ಕಪನಿಂಬರಗಿ, ಹಿಂಗಣಿ ಹಾಗೂ ಪಡನೂರ ಗ್ರಾಮ ಪಂಚಾಯತ್ ಕಾರ್ಯಾಲಯದ ನೋಟಿಸ್ ಬೋರ್ಡನಲ್ಲಿ ಪ್ರಕಟಿಸಲಾಗಿದ್ದು, ಅಭ್ಯರ್ಥಿಗಳ ಆಯ್ಕೆಗೆ ಆಕ್ಷೇಪಣೆ ಸಲ್ಲಿಸುವವರು ದಿನಾಂಕ : 18–03–2024ರೊಳಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವಿಜಯಪುರ ಕಚೇರಿಗೆ ಸಲ್ಲಿಸಬೇಕು.

ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಮಾತ್ರ ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದ್ದು, ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕನಕದಾಸ ಬಡಾವಣೆ, ಜಿಲ್ಲಾ ಪಂಚಾಯತ್ ಆವರಣ, ವಿಜಯಪುರ ದೂ: 08352–796060 ಸಂಖ್ಯೆಗೆ ಸಂಪರ್ಕಿಸುವಂತೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಯಂದಿರು ಮಕ್ಕಳಲ್ಲಿ ಸಂಸ್ಕಾರ ಬೆಳಸಿ :ಪಡಶೆಟ್ಟಿ



**ಉದಯರಶ್ಮಿ ನ್ಯೂಸ್**

ಸಿಂದಗಿ: ನ್ಯೂಜಿಲೆಂಡ್‌ನಲ್ಲಿ ಕನ್ನಡ ಸಂಘ, ಶರಣ ಸಾಹಿತ್ಯ ಪರಿಷತ್ತು ಮತ್ತು ಬಸವ ಸಮಿತಿಯನ್ನು ರಚಿಸಿಕೊಂಡು ಬಸವಣ್ಣನವರ ತತ್ವಾದರ್ಶಗಳನ್ನು ಸುಮಾರು ವರ್ಷಗಳಿಂದ ಬೆಳೆಸುತ್ತಿದ್ದೇನೆ ಎಂದು ನ್ಯೂಜಿಲೆಂಡಿನ ಬಸವ ಸಮಿತಿ ಸಂಸ್ಥಾಪಕ ಲಿಂಗಣ್ಣ ಕಲಬುರಗಿ ಹೇಳಿದರು,

ತಾಲೂಕಿನ ಯರಗಲ್ ಬಿಕೆ ಗ್ರಾಮದಲ್ಲಿ ಚಿಕ್ಕಪ್ಪಯ್ಯ ಶಿವಯೋಗಿಗಳ ಜಾತ್ರಾ ಮಹೋತ್ಸವದ ನಿಮಿತ್ಯ ಹಮ್ಮಿಕೊಂಡ ಅಬ್ಬೆ ತುಮಕೂರಿನ ವಿಶ್ವರಾಧ್ಯರ ಮಹಾ ಪುರಾಣ ಕಾರ್ಯಕ್ರಮದಲ್ಲಿ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು, ಬಸವಣ್ಣನವರ ತತ್ವಾದರ್ಶಗಳನ್ನು ಪಸರಿಸಲು ನ್ಯೂಜಿಲೆಂಡ, ಆಸ್ಟ್ರೇಲಿಯಾ ಮತ್ತು ಸಿಂಗಾಪುರ ಸೇರಿ 9 ಬಸವ ಸಮಿತಿ ಶಾಖೆಗಳನ್ನು ಪ್ರಾರಂಭಿಸಲಾಗಿದೆ. ಪ್ರತಿವರ್ಷ ಕರ್ನಾಟಕದಿಂದ ಹರಗುರು ಚರಮೂರ್ತಿಗಳನ್ನು ಕರೆಯಿಸಿ 9 ಶಾಖೆಗಳಿಗೆ ಭೇಟಿ ನೀಡಿಸಿ ಕನ್ನಡ ಬಳಗವನ್ನು ಕೂಡಿಸಿ ಕನ್ನಡ ನಾಡು ನುಡಿ ಬಗ್ಗೆ ಮಾಹಿತಿ ಕೊಡಿಸಲಾಗುವುದು ಎಂದರು.

ಈ ವೇಳೆ ಜಾನಪದ ವಿದ್ವಾಂಸ ಹಿರಿಯ ಸಾಹಿತಿ ಡಾ.ಎಂ.ಎಂ. ಪಡಶೆಟ್ಟಿ ಮಾತನಾಡಿ, ಭಕ್ತಿ ಎಂಬುದು ಎರಡು ರೀತಿಯಲ್ಲಿ ನಡೆಯುತ್ತದೆ ಒಂದು ದೇಶ ಭಕ್ತಿ, ಇನ್ನೊಂದು ದೈವ ಭಕ್ತಿ. ಈ ದೇಶದಲ್ಲಿ ದೈವ ಭಕ್ತಿ ನಮ್ಮ ನಾಡಿನ ತಾಯಂದಿರಿಂದ ಉಳಿದಿದೆ. ನಮ್ಮ ಭಾರತ ದೇಶ ಕೃಷಿ ಪ್ರಧಾನ ರಾಷ್ಟ್ರವಾಗಿದೆ. ಆದರೆ ಸಾಂಪ್ರದಾಯಿಕ ಕೃಷಿ ಪದ್ಧತಿಯಿಂದ ರೈತ ಸಮುದಾಯ ಹೊರ ಬಂದು ಆಧುನಿಕ ಕೃಷಿ ತಂತ್ರಜ್ಞಾನ ಬಳಸಿಕೊಳ್ಳುತ್ತಿದ್ದಾರೆ. ನಾಗರಿಕತೆ ಬೆಳದಂತೆ ಸಂಸ್ಕೃತಿ ನಶಿಸಿಹೋಗುತ್ತಿದೆ. ಇಂದಿನ ಮಕ್ಕಳ ಕೈಯಲ್ಲಿ ಮೋಬೈಲ್ ನೀಡುವ ಬದಲು ಪುಸ್ತಕ ನೀಡಬೇಕು. ತಾಯಂದಿರು ಮಕ್ಕಳಲ್ಲಿ ಸಂಸ್ಕಾರ ಬೆಳಸಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ರಟಕಲ್ ಶ್ರೀಮಠದ ರೇವಣಸಿದ್ದ ಶಿವಾಚಾರ್ಯರು, ಪುರಾಣಿಕರಾದ ರಟಕಲ್ ವಿರಕ್ತಮಠದ ಸಿದ್ದರಾಮ ಮಹಾಸ್ವಾಮಿಗಳು, ಗವಾಯಿಗಳಾದ ಮಾಹಾಂತೇಶ ನಾಗೋಜಿ, ಶಿವಪ್ಪ ಗವಸಾನಿ, ಗುರುಲಿಂಗಪ್ಪಗೌಡ ಪಾಟೀಲ, ಶರಣಗೌಡ ಪಾಟೀಲ, ಬಾಬು ಜಾದವ್, ವಿಜಯಕುಮಾರ ಬಗಲಿ, ದೊಡ್ಡಪ್ಪಗೌಡ ನಾಗಠಾಣ, ಮಲ್ಲಿಕಾರ್ಜುನ ಗುಣಾರಿ, ಉಮೇಶ ಬಿರಾದಾರ, ಅಶೋಕ ಕುಮಸಗಿ, ಸುಧಾಕರ ಚಿಕ್ಕಪ್ಪನಮಠ, ದಯಾನಂದ ಚಿಕ್ಕಪ್ಪನಮಠ, ಶಶಿಕಾಂತ ಚಿಕ್ಕಯ್ಯನಮಠ ಸೇರಿದಂತೆ ಯರಗಲ್ ಗ್ರಾಮಸ್ಥರು ಶ್ರೀಮಠದ ಭಕ್ತರು ಇದ್ದರು.

# ಕಾಲ ಕಾಲಕ್ಕೆಆರೋಗ್ಯ ತಪಾಸಣೆ ಮಾಡಿಸಿಕೊಳ್ಳಿ :ಸಾಗರ

**ಉದಯರಶ್ಮಿ ನ್ಯೂಸ್**

ಸಿಂದಗಿ: ಸರಕಾರ ಒದಗಿಸುವ ಆರೋಗ್ಯ ಸೌಲಭ್ಯಗಳನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದು ತಾಲೂಕು ಸಾರ್ವಜನಿಕ ಇಲಾಖೆಯ ಐಸಿಟಿಸಿ ವಿಭಾಗದ ಆಪ್ತಸಮಾಲೋಚಕ ಎಂ.ಪಿ ಸಾಗರ ಹೇಳಿದರು.

ಪಟ್ಟಣದ ಬಸ್ ನಿಲ್ದಾಣದ ಆವರಣದಲ್ಲಿ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿರೋಧಕ ಮತ್ತು ನಿಯಂತ್ರಣ ಇಲಾಖೆ, ತಾಲೂಕು ಆರೋಗ್ಯ ಇಲಾಖೆ, ಸಾರ್ವಜನಿಕ ಆಸ್ಪತ್ರೆಯ ಐಸಿಟಿಸಿ ವಿಭಾಗ ಹಾಗೂ ವಿವಿಧ ಸಂಘಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡ 2ನೆಯ ಹಂತದ ಸಮುದಾಯ ಆಧಾರಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಾತನಾಡಿದ ಅವರು, ಸಾರ್ವಜನಿಕರು ಕಾಲ ಕಾಲಕ್ಕೆ ತಮ್ಮ ಆರೋಗ್ಯ ತಪಾಸಣೆ ಮಾಡಿಸಿಕೊಂಡು ಮುಂಬರುವ ರೋಗಗಳ ಬಗ್ಗೆ ನೀಗಾವಹಿಸಬೇಕು. ಎಚ್‌ಐವಿ ಪರೀಕ್ಷೆ ಮತ್ತು ತಡೆಗಟ್ಟುವಿಕೆ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದರು.



ಈ ವೇಳೆ ಬಸ್ ನಿಲ್ದಾಣದಲ್ಲಿ 210ಕ್ಕೂ ಅಧಿಕ ಜನರು ತಪಾಸಣೆ ಮಾಡಿಕೊಂಡರು. ತಪಾಸಣಾ ಶಿಬಿರದಲ್ಲಿ ಸಿಬ್ಬಂದಿಗಳಾದ ಲವ ಗಾಣಿಗೇರ, ಡಿ. ಎಲ್. ಕುಂಬಾರ, ಮಹ್ಮದ್ ಸೋಯೆಬ್, ಮತ್‌ಸುದ್ ಕಲಾಲ್, ನವೀನ, ಪರಶುರಾಮ ಸೇರಿದಂತೆ ಪ್ರಯಾಣಿಕರು, ನಿರ್ವಾಹಕರು, ಚಾಲಕರು ಇದ್ದರು.

# ಜಾನಪದ ಮಾನವ ಜನಾಂಗದ ಸಂಸ್ಕೃತಿ :ಡಾ.ಚಿಕ್ಕಮಠ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಜಾನಪದ ಮಾನವ ಜನಾಂಗದ ಸಂಸ್ಕೃತಿಯಾಗಿದೆ. ಕಾಡು ಮಾನವರು ನಾಡಿಗೆ ಬಂದು ಸಂಘಟಿ–ತರಾಗಿ ಬದುಕಿಗಾಗಿ ಒಳ್ಳೆಯ ಆಚ–ಾರ, ವಿಚಾರ, ನಂಬಿಕೆ, ಸಂಪ್ರದಾಯ, ಮನೋರಂಜನೆ ರೂಢಿಸಿಕೊಂಡು ಜೀವನ ಪ್ರಾರಂಭಿಸಿದರು. ಈ ಎಲ್ಲ ಪದ್ದತಿಗಳು ಜಾನಪದ ಸಂಸ್ಕೃತಿಯಾಗಿ ಇಂದು ನಮ್ಮ ಬದುಕಿಗೆ ದಾರಿ ದೀಪವಾಗಿವೆ ಎಂದು ಎಂಜಿವ್ಹಿಸಿ ಬಿ.ಇಡಿ ಕಾಲೇಜ ಪ್ರಾಚಾರ್ಯ ಡಾ.ಆರ್.ಜಿ.ಚಿಕ್ಕಮಠ ಅಭಿಪ್ರಾಯಪಟ್ಟರು.

ತಾಲೂಕಿನ ಕುಂಟೋಜಿ ಗ್ರಾಮದಲ್ಲಿ ಹಿರೇಮಠದ ಡಾ.ಚನ್ನವೀರ ದೇವರ ಪಟ್ಟಾಧಿಕಾರ ಮಹೋತ್ಸವ ಹಾಗೂ ಕನ್ನಡ ಜಾನಪದ ಪರಿಷತ್ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಏರ್ಪಡಿಸಿದ " ಜಾನಪದ ಕಲಾ ಮೇಳ" ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಹಿರಿಯರು ಅನುಭವದ ಮೂಲಕ ಕಟ್ಟಿಕೊಟ್ಟ ಜಾನಪದ ಸಿದ್ಧಾಂತ ಸರ್ವ ಜನಾಂಗಕ್ಕೂ ಒಳಿತನ್ನು ಬಯಸುವ ಶ್ರೇಷ್ಠ ಪರಂಪರೆಯಾಗಿದೆ. ಅದನ್ನು ಅರಿತು ಅಳವಡಿಸಿಕೊಂಡು ಬದುಕನ್ನು ಸಾರ್ಥಕ ಮಾಡಿಕೊಳ್ಳಬೇಕೆಂದು ಕರೆ ನೀಡಿದರು.

" ಜಾನಪದ ಸಂಸ್ಕೃತಿ ಉಳಿಸಿ ಬೆಳೆಸುವಲ್ಲಿ ಕನ್ನಡ ಜಾನಪದ ಪರಿಷತ್ತಿನ ಪಾತ್ರ" ಕುರಿತು ಉಪನ್ಯಾಸ ನೀಡಿದ ಕಜಾಪ ಬಸವನಬಾಗೇವಾಡಿ ತಾಲೂಕಾಧ್ಯಕ್ಷ ದೇವೇಂದ್ರ ಗೋನಾಳ, ಕಜಾಪ 9 ವರ್ಷದಲ್ಲಿ ಯಾವ ಸಂಘಟನೆಯೂ ಮಾಡದಂತಹ ಕೆಲಸಗಳನ್ನು ಮಾಡುತ್ತಿದೆ. ಕಲಾವಿದರಿಗೆ ವೇದಿಕೆ, ಸನ್ಮಾನ, ಪ್ರಶಸ್ತಿ, ಸಮೀಕ್ಷೆ, ಕೃತಿ ಪ್ರಕಟಣೆ, ಮಾಡುತ್ತಾ ಸಮಾವೇಶ, ಸಮ್ಮೇಳನ, ತರಬೇತಿ ಶಿಬಿರ ನಡೆಸುತ್ತಾ ಬಂದಿದೆ. ಕಲಾವಿದರಿಗೆ ಬಟ್ಟೆ ,ದವಸ – ದಾನ್ಯ, ವಿತರಿಸಿದೆ. ಜಿಲ್ಲಾ, ತಾಲೂಕು, ವಲಯ ಮತ್ತು ಗ್ರಾಮ ಘಟಕ ರಚಿಸಿ ಜಾನಪದ ಕಲೆ – ಕಲಾವಿದರ ಬೆಳವಣಿಗೆಗೆ ಕಾರಣವಾಗಿದೆ ಎಂದು ಹೇಳಿದರು.




ಅಧ್ಯಕ್ಷತೆ ವಹಿಸಿ ಮಾತನಾಡಿದ ಕನ್ನಡ ಜಾನಪದ ಪರಿಷತ್ ವಿಜಯಪುರ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ, ರಾಜ್ಯದಲ್ಲಿಯೇ ವಿಜಯಪುರ ಜಿಲ್ಲಾ ಘಟಕ ಮೊದಲು ಉದ್ಘಟನೆಯಾಗಿ ಸಾವಿರಾರು ಕಲಾವಿದರ ಮಾಹಿತಿ ಸಂಗ್ರಹ, ಮೂರು ಸಾವಿರಕ್ಕೂ ಹೆಚ್ಚಿನ ಸಂಖ್ಯೆಯ ಕಲಾವಿದರಿಗೆ ಪ್ರದರ್ಶನಕ್ಕೆ ವೇದಿಕೆ, ಸನ್ಮಾನ, ಪ್ರಶಸ್ತಿ ಕಾರ್ಯ ಮಾಡಿದ್ದೇವೆ. ಜಿಲ್ಲೆಯ ಮಠ – ಮಂದಿರ, ಸಂಘ – ಸಂಸ್ಥೆ, ಹಾಗೂ ಪರಿಷತ್ತಿನ ಪದಾಧಿಕಾರಿಗಳ ಸಹಕಾರ ಮರೆಯಲಾಗದು ಎಂದರು.

ಮುದ್ದೇಬಿಹಾಳ ತಾಲೂಕು ಕ ಜಾ ಪ ಅಧ್ಯಕ್ಷ ಎ ಆರ್ ಮುಲ್ಲಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಅತಿಥಿಗಳಾಗಿ ಹಿರೇಮುರಾಳ ಪಿಕೆಪಿ–ಎಸ್ ಅಧ್ಯಕ್ಷ ಬಿ ಬಿ ಭೋವಿ, ಕ ಜಾ ಪ ಹಿರೇಮುರಾಳ ವಲಯ ಅಧ್ಯಕ್ಷ ಗಿರೀಶಗೌಡ ಪಾಟೀಲ, ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಜಾನಪದ ಕಲಾವಿದ ಗುರುಪಾದಪ್ಪ ಚಲವಾದಿ, ಮೌಲಾಸಾಹೇಬ ಜಹಾಗೀರದಾರ, ಪಿ ಹೆಚ್ ಡಿ ಪುರಸ್ಕೃತ ಡಾ. ಹೂಗಾರವರನ್ನು ಸನ್ಮಾನಿಸಲಾಯಿತು.

ಕಜಾಪ ಸದಸ್ಯರಾದ ಶ್ರೀಮತಿ ಎಸ್ ಬಿ ಗೊಂಗಡಿ ಸ್ವಾಗತಿಸಿ ನಿರೂಪಿಸಿದರು. ಎಂ ಬಿ ವಾಳದ ವಂದಿಸಿದರು. ಕಾರ್ಯಕ್ರಮದಲ್ಲಿ ಗೋನಾಳ – ಭಜನೆ, ಗಂಗೂರ ತತ್ವಪದ, ಉಪ್ಪಲದಿನ್ನಿ ರಿವಾಯತ ಪದ, ಇಟಗಿ ಜನಪದ ಗೀತೆ, ಬಿದರಕುಂದಿ – ಕುಂಟೋಜಿ ಹಂತಿಪದ, ಅಬ್ಬಿಹಾಳ ಡೊಳ್ಳಿನ ಪದ, ಕಣಮುಚನಾಳ ಸಂಪ್ರದಾಯ ಪದ, ದೇವರಹುಲಗಬಾಳ ಸೋಬಾನೆಪದ, ಕುಂಟೋಜಿ ಚೌಡಕಿ ಪದ ಪ್ರದರ್ಶನಗೊಂಡವು.4

# ಆಲಮೇಲ ತಾಲೂಕಾ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ರಚನೆಗೆ ಅಧಿಸೂಚನೆ :ಆಕ್ಷೇಪಣೆ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಸಿಂದಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮಾರುಕಟ್ಟೆ ಕ್ಷೇತ್ರವನ್ನು ವಿಭಜಿಸಿ, ಆಲಮೇಲ ತಾಲೂಕಿಗೆ ಪ್ರತ್ಯೇಕ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ರಚಿಸಲು ಸಹಕಾರ ಇಲಾಖೆ ಅಧೀನ ಕಾರ್ಯದರ್ಶಿಗಳು ಅಧಿಸೂಚನೆ ಹೊರಡಿಸಿದ್ದು, ಈ ಕುರಿತು ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ಕಲಂ 145ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರೈತರ ಹಿತದೃಷ್ಟಿಯಿಂದ ವಿಜಯಪುರ ಜಿಲ್ಲೆಯ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮಾರುಕಟ್ಟೆ ಕೇತ್ರವನ್ನು ವಿಭಜಿಸಿ, ಅಲಮೇಲ ತಾಲ್ಲೂಕಿಗೆ ಹೊಸದಾಗಿ ಪ್ರತ್ಯೇಕ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ರಚಿಸಲು ಹಾಗೂ 95 ಅಧಿಸೂಚಿತ ಕೃಷಿ ಉತ್ಪನ್ನಗಳ ಮಾರಾಟ ನಿಯಂತ್ರಣಕ್ಕೆ ಒಳಪಡಿಸಲು ಉದ್ದೇಶಿಸಲಾಗಿದೆ.

ಉದ್ದೇಶಿತ ಪ್ರಸ್ತಾವನೆಗೆ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966ರ ಕಲಂ 03 ರನ್ವಯ ಆಕ್ಷೇಪಣೆ/ಸಲಹೆಗಳನ್ನು ಆಹ್ವಾನಿಸಿದ್ದು, ಯಾವುದೇ ಆಕ್ಷೇಪಣೆಗಳು/ಸಲಹೆಗಳು ಇದ್ದಲ್ಲಿ, ಈ ಅಧಿಸೂಚನೆಯು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಅಥವಾ ಈ ಪ್ರಕಟಣೆಯ 30 ದಿವಸದೊಳಗಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕೊಠಡಿ ಸಂಖ್ಯೆ: 610.6ನೇ ಮಹಡಿ, 3ನೇ ಗೇಟ್. ಸಹಾಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು 560001 ಇವರಿಗೆ ಸಲ್ಲಿಸುವಂತೆ ಸಿಂದಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಜಾನಪದ ಮಾನವ ಜನಾಂಗದ ಸಂಸ್ಕೃತಿ :ಡಾ.ಚಿಕ್ಕಮಠ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಜಾನಪದ ಮಾನವ ಜನಾಂಗದ ಸಂಸ್ಕೃತಿಯಾಗಿದೆ. ಕಾಡು ಮಾನವರು ನಾಡಿಗೆ ಬಂದು ಸಂಘಟಿ–ತರಾಗಿ ಬದುಕಿಗಾಗಿ ಒಳ್ಳೆಯ ಆಚ–ಾರ, ವಿಚಾರ, ನಂಬಿಕೆ, ಸಂಪ್ರದಾಯ, ಮನೋರಂಜನೆ ರೂಢಿಸಿಕೊಂಡು ಜೀವನ ಪ್ರಾರಂಭಿಸಿದರು. ಈ ಎಲ್ಲ ಪದ್ದತಿಗಳು ಜಾನಪದ ಸಂಸ್ಕೃತಿಯಾಗಿ ಇಂದು ನಮ್ಮ ಬದುಕಿಗೆ ದಾರಿ ದೀಪವಾಗಿವೆ ಎಂದು ಎಂಜಿವ್ಹಿಸಿ ಬಿ.ಇಡಿ ಕಾಲೇಜ ಪ್ರಾಚಾರ್ಯ ಡಾ.ಆರ್.ಜಿ.ಚಿಕ್ಕಮಠ ಅಭಿಪ್ರಾಯಪಟ್ಟರು.

ತಾಲೂಕಿನ ಕುಂಟೋಜಿ ಗ್ರಾಮದಲ್ಲಿ ಹಿರೇಮಠದ ಡಾ.ಚನ್ನವೀರ ದೇವರ ಪಟ್ಟಾಧಿಕಾರ ಮಹೋತ್ಸವ ಹಾಗೂ ಕನ್ನಡ ಜಾನಪದ ಪರಿಷತ್ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಏರ್ಪಡಿಸಿದ " ಜಾನಪದ ಕಲಾ ಮೇಳ" ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಹಿರಿಯರು ಅನುಭವದ ಮೂಲಕ ಕಟ್ಟಿಕೊಟ್ಟ ಜಾನಪದ ಸಿದ್ಧಾಂತ ಸರ್ವ ಜನಾಂಗಕ್ಕೂ ಒಳಿತನ್ನು ಬಯಸುವ ಶ್ರೇಷ್ಠ ಪರಂಪರೆಯಾಗಿದೆ. ಅದನ್ನು ಅರಿತು ಅಳವಡಿಸಿಕೊಂಡು ಬದುಕನ್ನು ಸಾರ್ಥಕ ಮಾಡಿಕೊಳ್ಳಬೇಕೆಂದು ಕರೆ ನೀಡಿದರು.

" ಜಾನಪದ ಸಂಸ್ಕೃತಿ ಉಳಿಸಿ ಬೆಳೆಸುವಲ್ಲಿ ಕನ್ನಡ ಜಾನಪದ ಪರಿಷತ್ತಿನ ಪಾತ್ರ" ಕುರಿತು ಉಪನ್ಯಾಸ ನೀಡಿದ ಕಜಾಪ ಬಸವನಬಾಗೇವಾಡಿ ತಾಲೂಕಾಧ್ಯಕ್ಷ ದೇವೇಂದ್ರ ಗೋನಾಳ, ಕಜಾಪ 9 ವರ್ಷದಲ್ಲಿ ಯಾವ ಸಂಘಟನೆಯೂ ಮಾಡದಂತಹ ಕೆಲಸಗಳನ್ನು ಮಾಡುತ್ತಿದೆ. ಕಲಾವಿದರಿಗೆ ವೇದಿಕೆ, ಸನ್ಮಾನ, ಪ್ರಶಸ್ತಿ, ಸಮೀಕ್ಷೆ, ಕೃತಿ ಪ್ರಕಟಣೆ, ಮಾಡುತ್ತಾ ಸಮಾವೇಶ, ಸಮ್ಮೇಳನ, ತರಬೇತಿ ಶಿಬಿರ ನಡೆಸುತ್ತಾ ಬಂದಿದೆ. ಕಲಾವಿದರಿಗೆ ಬಟ್ಟೆ ,ದವಸ – ದಾನ್ಯ, ವಿತರಿಸಿದೆ. ಜಿಲ್ಲಾ, ತಾಲೂಕು, ವಲಯ ಮತ್ತು ಗ್ರಾಮ ಘಟಕ ರಚಿಸಿ ಜಾನಪದ ಕಲೆ – ಕಲಾವಿದರ ಬೆಳವಣಿಗೆಗೆ ಕಾರಣವಾಗಿದೆ ಎಂದು ಹೇಳಿದರು.




ಅಧ್ಯಕ್ಷತೆ ವಹಿಸಿ ಮಾತನಾಡಿದ ಕನ್ನಡ ಜಾನಪದ ಪರಿಷತ್ ವಿಜಯಪುರ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ, ರಾಜ್ಯದಲ್ಲಿಯೇ ವಿಜಯಪುರ ಜಿಲ್ಲಾ ಘಟಕ ಮೊದಲು ಉದ್ಘಟನೆಯಾಗಿ ಸಾವಿರಾರು ಕಲಾವಿದರ ಮಾಹಿತಿ ಸಂಗ್ರಹ, ಮೂರು ಸಾವಿರಕ್ಕೂ ಹೆಚ್ಚಿನ ಸಂಖ್ಯೆಯ ಕಲಾವಿದರಿಗೆ ಪ್ರದರ್ಶನಕ್ಕೆ ವೇದಿಕೆ, ಸನ್ಮಾನ, ಪ್ರಶಸ್ತಿ ಕಾರ್ಯ ಮಾಡಿದ್ದೇವೆ. ಜಿಲ್ಲೆಯ ಮಠ – ಮಂದಿರ, ಸಂಘ – ಸಂಸ್ಥೆ, ಹಾಗೂ ಪರಿಷತ್ತಿನ ಪದಾಧಿಕಾರಿಗಳ ಸಹಕಾರ ಮರೆಯಲಾಗದು ಎಂದರು.

ಮುದ್ದೇಬಿಹಾಳ ತಾಲೂಕು ಕ ಜಾ ಪ ಅಧ್ಯಕ್ಷ ಎ ಆರ್ ಮುಲ್ಲಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಅತಿಥಿಗಳಾಗಿ ಹಿರೇಮುರಾಳ ಪಿಕೆಪಿ–ಎಸ್ ಅಧ್ಯಕ್ಷ ಬಿ ಬಿ ಭೋವಿ, ಕ ಜಾ ಪ ಹಿರೇಮುರಾಳ ವಲಯ ಅಧ್ಯಕ್ಷ ಗಿರೀಶಗೌಡ ಪಾಟೀಲ, ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಜಾನಪದ ಕಲಾವಿದ ಗುರುಪಾದಪ್ಪ ಚಲವಾದಿ, ಮೌಲಾಸಾಹೇಬ ಜಹಾಗೀರದಾರ, ಪಿ ಹೆಚ್ ಡಿ ಪುರಸ್ಕೃತ ಡಾ. ಹೂಗಾರವರನ್ನು ಸನ್ಮಾನಿಸಲಾಯಿತು.

ಕಜಾಪ ಸದಸ್ಯರಾದ ಶ್ರೀಮತಿ ಎಸ್ ಬಿ ಗೊಂಗಡಿ ಸ್ವಾಗತಿಸಿ ನಿರೂಪಿಸಿದರು. ಎಂ ಬಿ ವಾಳದ ವಂದಿಸಿದರು. ಕಾರ್ಯಕ್ರಮದಲ್ಲಿ ಗೋನಾಳ – ಭಜನೆ, ಗಂಗೂರ ತತ್ವಪದ, ಉಪ್ಪಲದಿನ್ನಿ ರಿವಾಯತ ಪದ, ಇಟಗಿ ಜನಪದ ಗೀತೆ, ಬಿದರಕುಂದಿ – ಕುಂಟೋಜಿ ಹಂತಿಪದ, ಅಬ್ಬಿಹಾಳ ಡೊಳ್ಳಿನ ಪದ, ಕಣಮುಚನಾಳ ಸಂಪ್ರದಾಯ ಪದ, ದೇವರಹುಲಗಬಾಳ ಸೋಬಾನೆಪದ, ಕುಂಟೋಜಿ ಚೌಡಕಿ ಪದ ಪ್ರದರ್ಶನಗೊಂಡವು.


# ಇತಿಹಾಸ–ಭೌತಶಾಸ್ತ್ರ ಪರೀಕ್ಷೆ: 1163 ವಿದ್ಯಾರ್ಥಿಗಳು ಗೈರು

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ಗುರುವಾರ ನಡೆದ ದ್ವಿತೀಯ ಪಿಯುಸಿ ಇತಿಹಾಸ ಹಾಗೂ ಭೌತಶಾಸ್ತ್ರ ಪರೀಕ್ಷೆಯಲ್ಲಿ 1163 ವಿದ್ಯಾರ್ಥಿಗಳ ಗೈರ ಹಾಜರಾಗಿದ್ದರು ಎಂದು ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

ಇತಿಹಾಸ ಪರೀಕ್ಷೆಗೆ ಒಟ್ಟು 17409 ವಿದ್ಯಾರ್ಥಿಗಳು ನೊಂದಾಯಿಸಿಕೊಂಡಿದ್ದು, 16423 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 986 ವಿದ್ಯಾರ್ಥಿಗಳು ಗೈರ ಹಾಜರಾಗಿದ್ದರು. ಅದರಂತೆ ಭೌತಶಾಸ್ತ್ರ ಪರೀಕ್ಷೆಗೆ 11504 ವಿದ್ಯಾರ್ಥಿಗಳು ನೊಂದಾಯಿಸಿಕೊಂಡಿದ್ದು, 11327 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 177 ವಿದ್ಯಾರ್ಥಿಗಳು ಗೈರ ಹಾಜರಾಗಿದ್ದರು. ಒಟ್ಟಾರೆ 1163 ವಿದ್ಯಾರ್ಥಿಗಳು ಪರೀಕ್ಷೆಗೆ ಗೈರ ಹಾಜರಾಗಿದ್ದರು ಎಂದು ಅವರು ತಿಳಿಸಿದ್ದಾರೆ.

# ಕೆಡಿಪಿ ಸದಸ್ಯ ಹತ್ತರಕಿ ಗೆ ಸನ್ಮಾನ



**ಉದಯರಶ್ಮಿ ನ್ಯೂಸ್**

ಬ್ರಹ್ಮದೇವನಮಡು: ಸಿಂದಗಿ ತಾಲೂಕು ಮಟ್ಟದ ತ್ರೈಮಾಸಿಕ ಪರಿಶೀಲನಾ( ಕೆಡಿಪಿ) ಸಮಿತಿಗೆ ನಾಮನಿರ್ದೇಶರಾಗಿ ನೇಮಕವಾದ ಗೋಲಗೇರಿ ಗ್ರಾಮದ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಶಿವಯೋಗೆಪ್ಪ ಹತ್ತರಕಿ ಅವರನ್ನು ಕಾಂಗ್ರೆಸ್ ಪಕ್ಷದ ಯುವ ಮುಖಂಡ ಚಂದ್ರಶೇಖರ ಕೆಂಭಾವಿ ಸನ್ಮಾನಿಸಿದರು.

ಈ ವೇಳೆ ಪಕ್ಷದ ಮುಖಂಡ ಶಿವು ಹತ್ತಿ, ಹರ್ಷಪ್ಪಗೌಡ ಬಿರಾದಾರ, ಪತ್ರಕರ್ತ ಮಲ್ಲು ಕೆಂಭಾವಿ ಇದ್ದರು.


# ಸ್ಥಾಯಿ ಸಮಿತಿ ಸದಸ್ಯರ ಚುನಾವಣೆ ಮುಂದೂಡಿಕೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರ ಮಹಾನಗರ ಪಾಲಿಕೆಯ 21ನೇ ಅವಧಿಗೆ ವಿವಿಧ ನಾಲ್ಕು ಸ್ಥಾಯಿ ಸಮಿತಿಗಳ ಸದಸ್ಯರ ಆಯ್ಕೆಗೆ ಮಾ.12 ರಂದು ನಿಗದಿಪಡಿಸಿದ ಚುನಾವಣೆಯನ್ನು ಕಾರಣಾಂತರಗಳಿಂದ ಮುಂದೂಡಲಾಗಿದೆ ಎಂದು ವಿಜಯಪುರ ಮಹಾನಗರ ಪಾಲಿಕೆ ಅಧ್ಯಕ್ಷಾಧಿಕಾ–ರಿಗಳಾದ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರು ತಿಳಿಸಿದ್ದಾರೆ.

# ಕೆಡಿಪಿ ನಾಮನಿರ್ದೇಶಕರಾಗಿ ಶಿವಯೋಗೆಪ್ಪ ಹತ್ತರಕಿ ನೇಮಕ

**ಉದಯರಶ್ಮಿ ನ್ಯೂಸ್**




ಬ್ರಹ್ಮದೇವನಮಡು: ಸಿಂದಗಿ ತಾಲೂಕು ಮಟ್ಟದ ತ್ರೈಮಾಸಿಕ ಪರಿಶೀಲನಾ (ಕೆಡಿಪಿ) ಸಮಿತಿಗೆ ನಾಮನಿರ್ದೇಶಕರಾಗಿ ಸಿಂದಗಿ ತಾಲೂಕಿನ ಗೋಲಗೇರಿ ಗ್ರಾಮದ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಶಿವಯೋಗೆಪ್ಪ ಹತ್ತರಕಿ ಅವರನ್ನು ನೇಮಕ ಮಾಡಲಾಗಿದೆ ಎಂದು ಶಾಸಕ ಅಶೋಕ ಮನಗೂಳಿ ತಿಳಿಸಿದ್ದಾರೆ.

**ಉದಯರಶ್ಮಿ ದಿನಪತ್ರಿಕೆ**

## ಕಾವ್ಯರಶ್ಮಿ

–ಎಂ.ಹರಿಣಿ ಚಿನ್ನಿ ಮೋಹನಾ

("ನಮ್ಮ ಕಥಾ ಅರಮನೆ" ಬರಹಗಾರರು)



ಶಿವ_ಶಿವ_ಎಂದರೆ_ಭಯವಿಲ್ಲ
ಕಾಪಾಡೋ ಶಿವನೇ ಹರಹರನೇ
ಶಂಕರ ಶಶಿಧರನೇ ಗವಿಗಂಗಾಧರನೇ..

ಕಾಶಿಯಲಿ ನೆಲೆನಿಂತ ವಿಶ್ವನಾಥನೇ
ಜಗವನು ಕಾಪಾಡೋ ಜಗದೀಶ್ವರನೇ..

ಸೃಷ್ಟಿ ಸ್ಥಿತಿ ಲಯ ಕರ್ತನು ನೀನೇ..!
ನಮೋ ನಮೋ ಮಂಜುನಾಥನೇ.!

ನಿನ್ನಯ ನಾಮವ ಜಪಿಸಲು ಹೀಗೆ
ಕಷ್ಟಗಳು ಓಡುವವು ಹಿಂದೆ ಹಿಂದೆಗೆ

ಜಗವದು ಸುಂದರ ನಿನ್ನಿಂದ
ಅನುಕ್ಷಣ ನಿನ್ನ ಜಪದಿಂದ..

ಶಿವ ಶಿವ ಎಂದರೆ ಭಯವಿಲ್ಲ
ನೀನೇ ತುಂಬಿರುವೆ ಜಗವೆಲ್ಲ..

ನಿನ್ನಯ ನಾಮಕೆ ಸಾಟಿ ಇಲ್ಲ
ಹರಹರ ಎಂದರೆ ದುಗುಡವೇ ಇಲ್ಲ..

ಬಸವನ ಮೇಲೆ ನಿನ್ನಯ ಪಯಣ
ನಿನ್ನಯ ಚರಣದಿಂ ನರ ಜನ್ಮ ಪಾವನ



ಧರಿಸಿರುವೆ ನೀನು ನಾಗಾಭರಣ
ನೀನಿರುವ ಮನದಿಂ ಭವ ಭಯ ಹರಣ

ಕೇಳಲು ಚೆಂದ ಡಮರುಗ ನಾದ
ತ್ರಿಶೂಲ ಜೊತೆಗೆ ಜಡೆಯಲಿ ಜೋಗ

ಗಣಪನು ತೋರಿದ ಜಗವು ನೀನೇ
ಗಂಗೆಯ ಕಳಿಸುತ ಹರಸು ನಮ್ಮನ್ನೆ

ಭಸ್ಮವ ಬಳಿದಿಹೆ ಮೈಯಲ್ಲಿ
ಅರ್ಧ ದೇಹವನೆ ಕೊಟ್ಟೆ ಪಾರ್ವತಿಗೆ ನಿನ್ನಲ್ಲಿ

ನೀನಿರುವ ಮನೆಯೇ ಕೈಲಾಸ
ನೀನಿದ್ದ ಮನಸಲಿ ಬತ್ತದು ಉಲ್ಲಾಸ

ಬೇಡುವೆ ಎಂದೂ ನೀಡೆಂದು ಸಂತಸ
ಮುಕ್ತಿಯ ಕರುಣಿಸೊ ರುದ್ರ ನೀನೇ ಸ್ಮಶಾನ ವಾಸ..

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

# ವೈರುಧ್ಯಗಳ ಗೆದ್ದವ ಈ ಶಿವ:



## ಭಾವರಶ್ಮಿ

– ಡಾ. ರಾಜಶೇಖರ ನಾಗೂರ

("ನಮ್ಮ ಕಥಾ ಅರಮನೆ" ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**

ಶಿವನನ್ನು ಒಮ್ಮೆ ಗಮನಿಸಿ,
ಶಿವನ ಜಡೆಯಲ್ಲಿ ಗಂಗೆ (ನೀರು)
ಹಣೆಯಲ್ಲಿ ಮೂರನೇ ಕಣ್ಣು (ಬೆಂಕಿ)
ತಲೆಯಲ್ಲಿ ಚಂದ್ರ (ಅಮೃತ)
ಗಂಟಲಲ್ಲಿ ವಿಷ (ವಿಷಕಂಠ)
ಶಿವನ ಕೊರಳಲ್ಲಿ ಹಾವು
ಎದುರಿಗೆ
ಮಗ ಗಣೇಶನ ವಾಹನ ಇಲಿ.
ಕಾರ್ತಿಕೇಯನ ವಾಹನ ನವಿಲು.
ಶಿವನ ವಾಹನ ನಂದಿ
ಪಕ್ಕದಲ್ಲಿರುವ ಪಾರ್ವತಿಯ ವಾಹನ ಹುಲಿ.

ಹೀಗೆ ನೀರು ಮತ್ತು ಬೆಂಕಿ ಪರಸ್ಪರ ವಿರುದ್ಧ ವಾದವುಗಳು ಆದರೂ ಜೊತೆಯಾಗಿ ಒಂದೇ ಕಡೆ ಶಿವನಲ್ಲಿವೆ. ಅಮೃತ ವಿಷ ಜೊತೆಯಾಗಿವೆ. ಹಾವು–ಇಲಿ ಅಥವಾ ಹಾವು–ನವಿಲು ಒಟ್ಟಿಗೆ ಇರುವ ಏಕೈಕ ಸ್ಥಳ ಶಿವನ ಸನ್ನಿಧಿ. ನಂದಿ ಮತ್ತು ಸಿಂಹ ಒಟ್ಟಿಗೆ ಇರಲು ಸಾಧ್ಯವಿಲ್ಲ. ಶಿವನ ಸಾಮಿಪ್ಯದಲ್ಲಿ ಇದು ಸಾಧ್ಯವಿದೆ.

ಹೀಗೆ ಬೆಂಕಿ–ನೀರು, ವಿಷ–ಅಮೃತ, ಹಾವು–ಇಲಿ, ಹಾವು–ನವಿಲು, ಸಿಂಹ–ನಂದಿ ಎಲ್ಲಾ ಪರಸ್ಪರ ವಿರುದ್ಧವಾಗಿರುವ ವೈರುಧ್ಯಗಳನ್ನು ತನ್ನೊಳಗೆ ಅಥವಾ ತನ್ನ ಸುತ್ತಮುತ್ತಲು ಇರಿಸಿಕೊಂಡಿದ್ದರೂ ಶಿವನ ಮಂದಹಾಸದಲ್ಲಿ ಕಿಂಚಿತ್ತೂ ಬದಲಾವಣೆ ಇಲ್ಲ.

ನಾವು ನೀವುಗಳು ಬದುಕಿನ ಎಲ್ಲಾ ವೈರುಧ್ಯಗಳ ನಡುವೆ ವಿಚಲಿತರಾಗದೆ, ಕಷ್ಟ–ಸುಖಗಳ ನಡುವೆ, ಶತ್ರು–ಮಿತ್ರರ ಜೊತೆಗೆ, ಸಾವು–ನೋವುಗಳ ಸಂಗಡ, ಸಮಾಧಾನದಿಂದ ಹಸನ್ಮುಖಿಯಾಗಿ ಬದುಕುವುದೇ ನಿಜವಾದ ಜೀವನ ಎನ್ನುವ ಸ್ಪಷ್ಟ ಸಂದೇಶ ಕೊಡುವ ಈ ಭಗವಂತ ಶಿವನನ್ನು ನೋಡಿ ಅರಿಯೋಣ .

ಎಲ್ಲರಿಗೂ ಶಿವರಾತ್ರಿಯು ಶುಭಾಶಯಗಳು

ಭಗವಂತ ಶಿವನ ಕೃಪೆ ಎಲ್ಲರ ಮೇಲಿರಲಿ



**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR